MAA ಫ್ರೆಂಡ್ಸ್ ಸಾರಥ್ಯದಲ್ಲಿ...

www.yuvamarga.com Yuva Marga yuva_marga_

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

YUVA MARGA KANNADA DAILY NEWS PAPER

ಸಂಪುಟ: 05 | ಸಂಚಿಕೆ: 62 | ಮಂಗಳವಾರ : 23-12-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 05 | ISSUE: 62 | TUESDAY : 23-12-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

**2026ರ ಜನವರಿ 29, 30, 31ಕ್ಕೆ ಉತ್ಸವ ನಿಗದಿ * ಸಿದ್ಧತೆಗಾಗಿ ಸಭೆಗೂ ಮೊದಲೇ ಸಮಿತಿ ರಚಿಸಿದ ಜಿಲ್ಲಾಡಳಿತ * ಎಲ್ಲ ಸಮಿತಿಗಳಲ್ಲಿನ ಅಧಿಕಾರಿಗಳೊಂದಿಗೆ ಪ್ರಥಮ ಸಭೆ**

# ರಾಯಚೂರು ಉತ್ಸವಕ್ಕೆ ಸಿದ್ಧತೆ ಈ ಕ್ಷಣದಿಂದಲೇ ಆರಂಭವಾಗಲಿ: ಜಿಲ್ಲಾಧಿಕಾರಿ ನಿತೀಶ್ ಕೆ. ನಿರ್ದೇಶನ





ಯುವಮಾರ್ಗ ಸುದ್ದಿ

**ರಾಯಚೂರು,ಡಿ.22–** ಬಹುವರ್ಷಗಳ ನಂತರ ಜಿಲ್ಲೆಯಲ್ಲಿ 2026ರ ಜನವರಿ 29, 30 ಹಾಗೂ 31ರಂದು ಮೂರು ದಿನಗಳ ಕಾಲ ರಾಯಚೂರು ಉತ್ಸವ ನಿಗದಿಯಾಗಿದೆ. ಈ ಉತ್ಸವ ರಾಯಚೂರು ನಗರಕ್ಕಷ್ಟೇ ಸೀಮಿತವಲ್ಲ; ಇಡೀ ಜಿಲ್ಲೆಯ ಉತ್ಸವವಾಗಿದೆ. ಜಿಲ್ಲೆಯಲ್ಲಿನ ಎಲ್ಲ ಅಧಿಕಾರಿಗಳು ಮತ್ತು ಸಿಬ್ಬಂದಿ ಒಗ್ಗೂಡಿ ಮಾಡಬೇಕಾದ ಕಾರ್ಯಕ್ರಮವಾಗಿದ್ದು, ಸಿದ್ಧತಾ ಕಾರ್ಯವು ಇಂದಿನಿಂದಲೇ, ಈ ಕ್ಷಣದಿಂದಲೇ ಆರಂಭವಾಗಬೇಕು ಎಂದು ರಾಯಚೂರು ಉತ್ಸವದ ಸ್ವಾಗತ ಮತ್ತು ಶಿಷ್ಟಾಚಾರ ಸಮಿತಿಯ ಅಧ್ಯಕ್ಷರು ಆಗಿರುವ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಡಿಸೆಂಬರ್ 22ರ ಸೋಮವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ರಾಯಚೂರು ಉತ್ಸವ-26ರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಉತ್ಸವದ ಎಲ್ಲ ಕೆಲಸ-ಕಾರ್ಯಗಳ ಸುಗಮವಾಗಿ ನಡೆಯಲು ಅನುಕೂಲವಾಗುವಂತೆ ಉತ್ಸವದ ಮೊದಲನೇ ಸಭೆಯ ಪೂರ್ವದಲ್ಲಿಯೇ ನಾವು ಸಮಿತಿಗಳನ್ನು ರಚಿಸಿದ್ದೇವೆ. ಆಯಾ ಸಮಿತಿಗಳು ನಿರ್ವಹಿಸಬೇಕಾದ ಕಾರ್ಯಗಳನ್ನು ಪಟ್ಟಿ ಮಾಡಿದ್ದೇವೆ. ಅದರಂತೆ ಎಲ್ಲ ಕೆಲಸ ಕಾರ್ಯಗಳು ಅಚ್ಚುಕಟ್ಟಾಗಿ ನಡೆಯಬೇಕು ಎಂದು ಸೂಚನೆ ನೀಡಿದರು.

ಉತ್ಸವ ಮೂರು ದಿನಗಳ ಕಾಲ ಅದ್ದೂರಿ ಆಗಿ ನಡೆಯಬೇಕು. ರಾಯಚೂರು ಸಿಟಿ ಜೊತೆಗೆ ದೇವದುರ್ಗ, ಸಿರವಾರ, ಅರಕೇರಾ, ಲಿಂಗಸಗೂರು, ಮಸ್ಕಿ, ಸಿಂಧನೂರ, ಮಾನವಿ ಸೇರಿದಂತೆ ಎಲ್ಲ ತಾಲೂಕಿನ ಜನತೆ ಉತ್ಸವದಲ್ಲಿ ಭಾಗಿಯಾಗಬೇಕು. ಇದಕ್ಕಾಗಿ ಈಗಿನಿಂದಲೇ ಬಸ್ ಗಳ ವ್ಯವಸ್ಥೆಗೆ ಯೋಜನೆ ರೂಪಿಸಬೇಕು. ಮುಖ್ಯವಾಗಿ ಪೊಲೀಸ್ ಇಲಾಖೆಯು ಈಗಿನಿಂದಲೇ ಜಾಗೃತಿ ವಹಿಸಿ ಜನವರಿ 29, 30 ಹಾಗೂ 31ರಂದು ಅದ್ದೂರಿಯಾಗಿ ಜರುಗುವ ಕಾರ್ಯಕ್ರಮದಲ್ಲಿ ಯಾವುದೇ ರೀತಿಯ ಅವಘಡಗಳಾಗಿ ಜಿಲ್ಲೆಯ ಹೆಸರು ಕೆಡದಂತೆ ಜಣಸಂದಣಿ ನಿರ್ವಹಣೆಗೆ ಶಿಸ್ತುಬದ್ಧ ಯೋಜನೆ ರೂಪಿಸಬೇಕು. ವಾಹನಗಳ ಪಾರ್ಕಿಂಗಗೆ ಮಾರ್ಗಸೂಚಿ ರೂಪಿಸಿ ವಾಹನ ಮತ್ತು ಜನ ಸಂಚಾರಕ್ಕೆ ಸುಗಮ ವ್ಯವಸ್ಥೆ ಮಾಡಬೇಕು ಎಂದು ಜಿಲ್ಲಾಧಿಕಾರಿಗಳು ಪೊಲೀಸ್ ಇಲಾಖೆಗೆ ಸೂಚನೆ ನೀಡಿದರು.

ಜಿಲ್ಲಾ ಪಂಚಾಯತ್ ಸಿಇಓ ಈಶ್ವರ ಕಾಂದೂ ಮಾತನಾಡಿ, ಜಿಲ್ಲಾ ಉತ್ಸವವು ಅರ್ಥಪೂರ್ಣವಾಗಿ ಹಾಗೂ ವ್ಯವಸ್ಥಿತವಾಗಿ ನಡೆಯಲು ಈಗಾಗಲೇ ವಿವಿಧ ಸಮಿತಿಗಳನ್ನು ರಚಿಸಲಾಗಿದ್ದು, ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ವಹಿಸಿದ ಕೆಲಸಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಬೇಕೆಂದು ಸೂಚನೆ ನೀಡಿದರು.

ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ಮಾತನಾಡಿ, ಅಧಿಕಾರಿಗಳು ಮತ್ತು ಸಿಬ್ಬಂದಿ ಜಾಗೃತೆಯಿಂದ ಕೆಲಸ ಮಾಡಬೇಕು. ಗೊಂದಲಗಳಿದ್ದರೆ ಕೇಳಿ ಈಗಿನಿಂದಲೇ ಕೆಲಸ ಆರಂಭಿಸಬೇಕು. ಯಾರು ಸಹ ನಿರ್ಲಕ್ಷ್ಯ ಮಾಡಬಾರದು ಎಂದು ಎಚ್ಚರಿಕೆ ನೀಡಿದರು. ಸ್ವಾಗತ ಮತ್ತು ಶಿಷ್ಟಾಚಾರ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಹಾಗೂ ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ **(2ನೇ ಪುಟಕ್ಕೆ....)**

**ಯುವನಿಧಿ, ಗೃಹಲಕ್ಷ್ಮೀ, ಶಕ್ತಿ, ಗೃಹಜ್ಯೋತಿ, ಅನ್ನಭಾಗ್ಯ ಯೋಜನೆಗಳ ಫಲಾನುಭವಿಗಳೊಂದಿಗೆ ಸಂವಾದ**

# ಗ್ಯಾರಂಟಿ ಯೋಜನೆಗಳಿಂದ ಜನತೆಗೆ ಅನುಕೂಲ: ಎಸ್.ಆರ್.ಮೆಹರೋಜ್ ಖಾನ್





ಯುವಮಾರ್ಗ ಸುದ್ದಿ

**ರಾಯಚೂರು,ಡಿ.22**–ರಾಜ್ಯ ಸರ್ಕಾರದ ಗೃಹ ಲಕ್ಷ್ಮಿ, ಯುವನಿಧಿ, ಅನ್ನಭಾಗ್ಯ, ಗೃಹ ಜ್ಯೋತಿ ಹಾಗೂ ಶಕ್ತಿ ಯೋಜನೆಗಳು ಸಮಾಜದಲ್ಲಿನ ಎಲ್ಲ ವರ್ಗದ ಜನರ ಆರ್ಥಿಕ ಸಬಲತೆಗೆ ಕಾರಣವಾಗಿವೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್.ಮೆಹರೋಜ್ ಖಾನ್ ಅವರು ಹೇಳಿದರು.

ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆ, ಜಿಲ್ಲಾ ಕೌಶಲ್ಯ ಮಿಷನ್ ಹಾಗೂ ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆ, ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಕಲಬುರಗಿ ವಿಭಾಗದ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ರಾಯಚೂರಿನ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಇವರ ಸಂಯುಕ್ತಾಶ್ರದಲ್ಲಿ ಯುನನಿಧಿ ಯೋಜನೆ ಸೇರಿದಂತೆ ಐದು ಗ್ಯಾರಂಟಿ ಯೋಜನೆಗಳು ಸಮಾಜದಲ್ಲಿ ಉಂಟು ಮಾಡಿರುವ ಧನಾತ್ಮಕ ಪರಿಣಾಮಗಳ ಕುರಿತು ಡಿಸೆಂಬರ್ 22ರ ಸೋಮವಾರ ನಗರದ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆಡಳಿತ ಭವನದಲ್ಲಿ ನಡೆದ ವಿದ್ಯಾರ್ಥಿಗಳೊಂದಿಗೆ ಸಂವಾದ ಕಾರ್ಯಕ್ರಮದಲ್ಲಿ ಭಾಗಿಯಾಗಿ ಅವರು ಮಾತನಾಡಿದರು. ರಾಜ್ಯ ಸರ್ಕಾರವು ಬಡಜನರ ಕಲ್ಯಾಣಕ್ಕಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಜಾರಿಗೊಳಿಸಿ ಗಾಂಧೀಜಿ, ಡಾ.ಬಿ.ಆರ್.ಅಂಬೇಡ್ಕರ್ ಅವರ ಕನಸುಗಳನ್ನು ಸಾಕಾರಗೊಳಿಸುವಲ್ಲಿ ಯಶಸ್ವಿಯಾಗಿದೆ. ಸಮಾಜದಲ್ಲಿನ ಯುವ ಸಮೂಹ **(2ನೇ ಪುಟಕ್ಕೆ...)**

# ಗೃಹಲಕ್ಷ್ಮೀ ಯೋಜನೆಯ 5000 ಕೋಟಿ ರೂ. ಎಲ್ಲಿಗೆ ಹೋಯ್ತು..? : ಹೆಚ್‌ಡಿಕೆ ಪ್ರಶ್ನೆ



**ಹಾಸನ, ಡಿ.22**–ರಾಜ್ಯದ ಮಹಿಳೆಯರ ಬ್ಯಾಂಕ್ ಖಾತೆಗೆ ಜಮಾ ಆಗಬೇಕಿದ್ದ ಎರಡು ತಿಂಗಳ ಗೃಹಲಕ್ಷ್ಮಿ ಯೋಜನೆಯ ಹಣ ಎಲ್ಲಿಗೆ ಹೋಯಿತು? ಅದರ ಬಗ್ಗೆ ರಾಜ್ಯ ಸರ್ಕಾರ ಏನು ಕ್ರಮ ಕೈಗೊಂಡಿದೆ? ಎಂದು ಕೇಂದ್ರ ಬೃಹತ್ ಕೈಗಾರಿಕೆ ಹಾಗೂ ಉಕ್ಕು ಖಾತೆ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರು ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಮಾರ್ಚ್ ಮತ್ತು ಏಪ್ರಿಲ್ ತಿಂಗಳುಗಳಲ್ಲಿ ಕೊಡಬೇಕಿದ್ದ ಗೃಹಲಕ್ಷ್ಮಿ ಯೋಜನೆ ಹಣ ಖಜಾನೆಯಲ್ಲಿ ಇದೆಯೋ? ಅಥವಾ ಇಲ್ಲವೋ? ಎನ್ನುವ ಅಂಶವನ್ನು ಸ್ವತಃ ಹಣಕಾಸು ಖಾತೆ ಹೊಂದಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರೇ ಹೇಳಬೇಕು. ಅವರು ಮತ್ತು ಅವರ ಇಲಾಖೆಯ ಅಧಿಕಾರಿಗಳೇ ಇದಕ್ಕೆ ಜವಾಬ್ದಾರರು ಎಂದು ಆರೋಪಿಸಿದ್ದಾರೆ.

ಗೃಹಲಕ್ಷ್ಮಿ ಯೋಜನೆಯ 5 ಸಾವಿರ ಕೋಟಿ ಹಣದ ಬಗ್ಗೆ **(2ನೇ ಪುಟಕ್ಕೆ....)**

# ರಾಯಚೂರಿನಲ್ಲಿ ಸಿರಿಧಾನ್ಯಗಳ ಜಾಗೃತಿ ಜಾಥಾಕ್ಕೆ ಸಚಿವ ಎನ್.ಎಸ್.ಬೋಸರಾಜು ಚಾಲನೆ

ಯುವಮಾರ್ಗ ಸುದ್ದಿ




**ರಾಯಚೂರು,ಡಿ.22–** ಇಲ್ಲಿನ ಕೃಷಿ ಇಲಾಖೆಯಿಂದ ಸಿರಿಧಾನ್ಯ, ಸಾವಯವ ಉತ್ಪನ್ನಗಳ ಕುರಿತು ಗ್ರಾಹಕರಿಗೆ ಜಾಗೃತಿ ಮೂಡಿಸಲು ಸಿರಿಧಾನ್ಯಗಳ ನಡಿಗೆ ರೋಡ್ ಶೋ ಕಾರ್ಯಕ್ರಮಕ್ಕೆ ಡಿಸೆಂಬರ್ 22ರಂದು ನಗರದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರು ಹಾಗೂ ಕರ್ನಾಟಕ ವಿಧಾನ ಪರಿಷತ್ತು ಸಭಾ ನಾಯಕರಾದ ಎನ್.ಎಸ್.ಬೋಸರಾಜು ಅವರು ಬಣ್ಣಬಣ್ಣದ ಬಲೂನ್ ಹಾರಿಬಿಡುವ ಮೂಲಕ ಚಾಲನೆ ನೀಡಿದರು.

ಜಾಗೃತಿ ನಡಿಗೆಯು ಜಿಲ್ಲಾ ಪಂಚಾಯತ್ ಕಚೇರಿ ಆವರಣದಿಂದ ಆರಂಭವಾಗಿ, ಜಿಲ್ಲಾ ನ್ಯಾಯಾಲಯಗಳ ಸಂಕೀರ್ಣ, ಜಂಟಿ ಕೃಷಿ ನಿರ್ದೇಶಕರ ಕಚೇರಿ, ಬಸವೇಶ್ವರ ವೃತ್ತ ಮಾರ್ಗವಾಗಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ ರಾಯಚೂರು ಆವರಣದವರೆಗೆ ಸಾಗಿತು.

ಮೆರವಣಿಗೆಯುದ್ದಕ್ಕೂ ಸಿರಿಧಾನ್ಯಗಳ ಮಹತ್ವದ ಕುರಿತು ಘೋಷ ವಾಕ್ಯಗಳನ್ನು ಕೂಗಿ ಜಾಗೃತಿ ಮೂಡಿಸಲಾಯಿತು. ಕಾರ್ಯಕ್ರಮದಲ್ಲಿ ಡೊಳ್ಳು ಕುಣಿತ, ಸಿರಿಧಾನ್ಯ ಪ್ರದರ್ಶನ ಗಮನ ಸೆಳೆದವು. ರೈತರಿಗೆ ಸಂಬಂಧಿಸಿದ ನೃತ್ಯ ಪ್ರದರ್ಶನ ವಿಶೇಷವಾಗಿತ್ತು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಕೃಷಿ ವಿಜ್ಞಾನಗಳ ವಿಶ್ವ ವಿದ್ಯಾಲಯದ ಕುಲಪತಿ ಡಾ.ಎಂ.ಹನುಮಂತಪ್ಪ, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಪ್ರಕಾಶ ಚೌಹಾಣ್, ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತೇಗೇರಾ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಕೃಷಿ ಅಧಿಕಾರಿಗಳು, ಕೃಷಿ ಪರಿಕರ ಮಾರಾಟಗಾರರು, ಕೃಷಿ ಪದವೀಧರ ವಿಧ್ಯಾರ್ಥಿಗಳು ಇದ್ದರು

# ಜ.1 ರಂದು ತಾಲೂಕಿಗೆ ಆಗಮಿಸುವ ತುಂಗಾಭದ್ರಾ ಉಳಿಸಿ ಪಾದಯಾತ್ರೆಯನ್ನು ಯಶಸ್ವಿಗೊಳಿಸೋಣ:ಹಂಪಯ್ಯನಾಯಕ

ಯುವಮಾರ್ಗ ಸುದ್ದಿ




**ಮಾನ್ವಿ,ಡಿ.22**–ಪಟ್ಟಣದ ಧ್ಯಾನ ಮಂದಿರದಲ್ಲಿ ರಾಷ್ಟ್ರೀಯ ಸ್ವಾಭಿಮಾನ ಆಂದೋಲನ ನವದೆಹಲಿ , ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿ, ಪರ್ಯಾವರಣ ಟ್ರಸ್ಟ್ ಶಿವಮೊಗ್ಗ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡ ನಿರ್ಮಲ ತುಂಗಭದ್ರಾ ಅಭಿಯಾನ 3ನೇ ಹಂತದ ಜಲಜಾಗೃತಿ ಜನಜಾಗೃತಿ ತುಂಗಾಭದ್ರಾ ಉಳಿಸಿ ಪಾದಯಾತ್ರೆ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಶಾಸಕ ಹಂಪಯ್ಯನಾಯಕ ಮಾತನಾಡಿ ಇಂದು ದೇಶದ ಬಹುತೇಕ ನದಿಗಳು ಕಲಷಿತವಾಗಿವೇ ಜನರಿಗೆ ನದಿಗಳಲ್ಲಿ ಹರಿಯುವ ನೀರು ಕುಡಿಯುವುದಕ್ಕೆ ಕೂಡ ಯೋಗ್ಯವಾಗಿ ಉಳಿದಿಲ್ಲ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಹಾಗೂ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ನದಿಗಳಲ್ಲಿ ಮಾಲಿನ್ಯ ತಡೆಯುವುದಕ್ಕೆ ಅನೇಕ ಕ್ರಮಗಳನ್ನು ಕೈಗೊಂಡರು ಕೂಡ ಜನರ ಸಹಕಾರವಿಲ್ಲದೆ ನಾವು ನದಿಗಳನ್ನು ಸ್ವಚ್ಚವಾಗಿಸುವುದಕ್ಕೆ ಸಾಧ್ಯವಿಲ್ಲ ಈ ನಿಟ್ಟಿನಲ್ಲಿ ನಿರ್ಮಲ ತುಂಗಭದ್ರಾ ಅಭಿಯಾನ ಸಮಿತಿಯು ನಾಡಿನ ಜನರಿಗೆ ನದಿಗಳ ಮಹಾತ್ವ ತಿಳಿಸುವ ಕುರಿತು ಜನರಲ್ಲಿ ಜಾಗೃತಿ ಮೂಡಿಸುವ ಕಾರ್ಯವನ್ನು ಮಾಡುತ್ತಿರುವುದು ಉತ್ತಮ ಕಾರ್ಯವಾಗಿದ್ದು ತಾಲೂಕಿಗೆ ಜ.1 ರಂದು ಆಗಮಿಸುವ ತುಂಗಾಭದ್ರಾ ಉಳಿಸಿ ಪಾದಯಾತ್ರೆಯನ್ನು ನಾವೆಲ್ಲ ಕೂಡಿ ಸ್ವಾಗತಿಸೋಣ ಹಾಗೂ ಪಾದಯಾತ್ರೆಯಲ್ಲಿ ಸಾರ್ವಜನಿಕರು,ವಿದ್ಯಾರ್ಥಿಗಳು, ವಿವಿಧ ಪಕ್ಷಗಳ ಮುಖಂಡರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವ ಮೂಲಕ ಪಾದಯಾತ್ರೆಯನ್ನು ಯಶಸ್ವಿಗೊಳಿಸೋಣ ಎಂದು ತಿಳಿಸಿದರು.

ಪರ್ಯಾವರಣ ಟ್ರಸ್ಟ್ ಶಿವಮೊಗ್ಗ ಅಧ್ಯಕ್ಷರಾದ ಬಾಲಕೃಷ್ಣ **(2ನೇ ಪುಟಕ್ಕೆ.....)**

# ಮೊದಲನೇಯ ಪುಟದಿಂದ

## ರಾಯಚೂರು ಉತ್ಸವಕ್ಕೆ ಸಿದ್ಧತೆ ಈ ಕ್ಷಣದಿಂದಲೇ ಆರಂಭವಾಗಲಿ: ಜಿಲ್ಲಾಧಿಕಾರಿ ನಿತೀಶ್ ಕೆ. ನಿರ್ದೇಶನ

ಅವರು ಮಾತನಾಡಿ, ಆಯಾ ಸಮಿತಿಗಳ ವಿವರ, ನೇಮಿಸಿದ ಅಧಿಕಾರಿಗಳು ಮತ್ತು ಸಿಬ್ಬಂದಿ ವಿವರ ಹಾಗೂ ಕೆಲಸದ ಹಂಚಿಕೆಯ ವಿವರದ ಬಗ್ಗೆ ಸಮಗ್ರ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಕುಮಾರಸ್ವಾಮಿ, ಸಹಾಯಕ ಆಯುಕ್ತರಾದ ಗಜಾನನ ಬಾಳೆ, ಬಸವಣ್ಣೆಪ್ಪ ಕಲಶೆಟ್ಟಿ, ಪಾಲಿಕೆಯ ಸಮಿತಿ ಕಾರ್ಯದರ್ಶಿ ಶ್ರೀ ಕೃಷ್ಣ ಶಾವಂತಗೇರಿ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ಈರಣ್ಣ, ಮಹಾನಗರ ಪಾಲಿಕೆಯ ಉಪ ಆಯುಕ್ತರಾದ ಸಂತೋಷರಾಣಿ, ಆಯಾ ತಾಲೂಕಿನ ತಹಸೀಲ್ದಾರರು ಮತ್ತು ವಿವಿಧ ಇಲಾಖೆಗಳ ಅಧಿಕಾರಿಗಳು ಸಭೆಯಲ್ಲಿದ್ದರು.

## ಗ್ಯಾರಂಟಿ ಯೋಜನೆಗಳಿಂದ ಜನತೆಗೆ ಅನುಕೂಲ: ಎಸ್.ಆರ್.ಮೆಹರೋಜ್ ಖಾನ್

ಸೇರಿದಂತೆ ಎಲ್ಲರಿಗೂ ಗ್ಯಾರಂಟಿ ಯೋಜನೆಗಳು ಬಹಳ ಅನುಕೂಲವಾಗಿವೆ. ಈ ಯೋಜನೆಗಳಿಂದ ರಾಜ್ಯದ ಜನರ ಜೀವನಮಟ್ಟ ಸುಧಾರಣೆಯಾಗಿದೆ. ಮುಖ್ಯವಾಗಿ ಮಹಿಳೆಯರು ಆರ್ಥಿಕವಾಗಿ ಸಬಲರಾಗಿದ್ದಾರೆ. ಬಡಜನತೆಗೆ ಈ ಯೋಜನೆಗಳು ಬಹಳ ಸಹಕಾರಿಯಾಗಿವೆ ಎಂದರು.

ವಿದ್ಯಾರ್ಥಿಗಳೊಂದಿಗೆ ಸಂವಾದ: ಎಸ್.ಆರ್.ಮೆಹರೋಜ್ ಖಾನ್ ಅವರು ಇದೆ ವೇಳೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಯುವನಿಧಿ ಯೋಜನೆಯ ಸಹಾಯಧನದಿಂದ ಕಾನೂನು ಪದವಿ ಓದುತ್ತಿದ್ದು, ಇದೆ ರೀತಿ ಮುಂದಿನ ದಿನಗಳಲ್ಲಿ ವಿದ್ಯಾರ್ಥಿಗಳಿಗೆ ಹೆಚ್ಚಿನ ಮಟ್ಟದಲ್ಲಿ ಸೌಲಭ್ಯ ಒದಗಿಸಬೇಕೆಂದು ಕಾನೂನು ಪದವಿ ವಿದ್ಯಾರ್ಥಿ ಶಿವಪ್ಪ ಸಲಹೆ ಮಾಡಿದರು. ಗೃಹಲಕ್ಷ್ಮಿ ಯೋಜನೆಯ ಸಹಾಯಧನವು ಸಕಾಲಕ್ಕೆ ಸಿಗುವ ಹಾಗೆ ನೋಡಿಕೊಳ್ಳಬೇಕು ಎಂದು ಕೃಷಿ ವಿವಿಯ ವಿದ್ಯಾರ್ಥಿನಿ ಪಾವನಿ ಜೀವಿ ತಿಳಿಸಿದರು. ಗ್ಯಾರಂಟಿ ಯೋಜನೆಗಳಿಂದ ಮಹಿಳೆಯರು ಸ್ವಾವಲಂಬನೆ ಜೀವನ ನಡೆಸುತ್ತಿದ್ದಾರೆ. ಅನೇಕ ಮಹಿಳೆಯರು ಆರ್ಥಿಕವಾಗಿ ಸಬಲರಾಗಿದ್ದಾರೆ ಎಂದು ರಾಯಚೂರಿನ ವಡ್ಲೂರಿನ ಮಹೇಶ್ವರಿ ಅವರು ತಿಳಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ಸದಸ್ಯರು ಹಾಗೂ ಪ್ರಾದೇಶಿಕ ಅಸಮತೋಲನ ತಜ್ಞರಾದ ಡಾ.ರಝಾಕ್ ಉಸ್ತಾದ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ಕೃಷಿ ವಿವಿಯ ಕುಲಪತಿಗಳಾದ ಡಾ.ಎಂ.ಹನುಮಂತಪ್ಪ, ಆಡಳಿತ ಅಧಿಕಾರಿ ಜಾಗೃತಿ ದೇಶಪಾಂಡೆ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾ ನಿರ್ದೇಶಕರಾದ ಡಾ.ಟಿ.ರೋಣಿ, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ್ ಸೇರಿದಂತೆ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು, ಸದಸ್ಯರು ಹಾಗೂ ವಿದ್ಯಾರ್ಥಿಗಳು ಸಭೆಯಲ್ಲಿದ್ದರು.

## ಗೃಹಲಕ್ಷ್ಮೀ ಯೋಜನೆಯ 5000 ಕೋಟಿ ರೂ. ಎಲ್ಲಿಗೆ ಹೋಯ್ತು..? : ಹೆಚ್‌ಡಿಕೆ ಪ್ರಶ್ನೆ

ಸರಿಯಾದ ಮಾಹಿತಿ ನೀಡಿಲ್ಲ. ಇದು ಸಣ್ಣ ವಿಚಾರವಲ್ಲ. ಇದು ಹೇಗಾಯಿತು? ಎಂದು ಸಂಬಂಧಿತ ಸಚಿವರಿಂದ ಮಾಹಿತಿ ಪಡೆದಿದ್ದೀರಾ? ಆ ಸಚಿವರ ರಾಜೀನಾಮೆ ಕೇಳಿದ್ದೀರಾ? ಹೋಗಲಿ, ಯಾರಾದರೂ ಅಧಿಕಾರಿಯ ನ್ನು ಇದಕ್ಕೆ ಹೊಣೆ ಮಾಡಿ ಅಮಾನತು ಮಾಡಿದ್ದೀರಾ? ಇಷ್ಟು ದೊಡ್ಡ ಮೊತ್ತದ ಹಣದ ಬಗ್ಗೆ ಎಷ್ಟು ಹಗುರವಾಗಿ ನಡೆದು ಕೊಂಡಿದ್ದೀರಿ. ನಿಮಂತಹ ಹಣಕಾಸು ಸಚಿವರು ಅಮೆರಿಕದಲ್ಲೂ ಇಲ್ಲ. ಡೊನಾ ಲ್ಡ್ ಟ್ರಂಪ್ ಅವರಿಗೂ ಇಂಥ ಹಣಕಾಸು ಮಂತ್ರಿ ಸಿಗಲ್ಲವೇನೋ ಎಂದು ಅವರು ಲೇವಡಿ ಮಾಡಿದ್ದಾರೆ.

ಕೇಂದ್ರ ಸರ್ಕಾರ ಸಹಕಾರ ನೀಡುತ್ತಿಲ್ಲ ಎಂದು ರಾಜ್ಯ ಸರ್ಕಾರ ಹೇಳುವ ಬದಲು, ಕೇಂದ್ರದ ಮನವೊಲಿಸಲು ನೀವೇನು ಮಾಡಿದ್ದೀರಿ? ಎಂಬುದನ್ನು ಹೇಳಿ ಎಂದು ಅವರು ಖಾರವಾಗಿ ಪ್ರಶ್ನಿಸಿದ್ದಾರೆ.

ಎತ್ತಿನಹೊಳೆ ಯೋಜನೆಯಲ್ಲಿ ಕೇಂದ್ರ ಸರ್ಕಾರ ಅಡ್ಡಿ ಮಾಡುತ್ತಿದೆ ಎಂದು ರಾಜ್ಯ ಸರ್ಕಾರದ ಮಂತ್ರಿಗಳು ಆರೋಪ ಮಾಡುತ್ತಿದ್ದಾರೆ. ಆದರೆ, ಪರಿಸರಕ್ಕೆ ಸಂಬಂಧಿಸಿದ ನಿಯಮಗಳನ್ನು ಉಲ್ಲಂಘಿ ಸಿ, ಕಾನೂನು ಮೀರಿ ಅನೇಕ ಅನಧಿಕೃತ ಕಾಮಗಾರಿಗಳನ್ನು ನಡೆಸಿದ್ದಾರೆ. ಕೇಂದ್ರ ಪರಿಸರ ಸಚಿವಾಲಯ ಅದನ್ನು ಪ್ರಶ್ನೆ ಮಾಡಿದೆ. ಅದು ತಪ್ಪಾ? ಎಂದು ಅವರು ಹೇಳಿದ್ದಾರೆ. **(2ನೇ ಪುಟಕ್ಕೆ....)**

ಕೇಂದ್ರದಿಂದ ಬರುತ್ತಿರುವ ಅನುದಾನವನ್ನು ಸರಿಯಾಗಿ ಬಳಕೆ ಮಾಡುತ್ತಿಲ್ಲ ಹಾಗೂ ಅದಕ್ಕೆ ಪೂರಕವಾಗಿ ಮ್ಯಾಚಿಂಗ್ ಗ್ರಾಂಟ್‌ಗಳನ್ನು ಕೊಡುತ್ತಿಲ್ಲ. ಆ ಬಗ್ಗೆ ಕೇಂದ್ರ ಸರಕಾರಕ್ಕೆ ಮನವಿ ಮಾಡಿಲ್ಲ. ತಪ್ಪು ತಮ ಕಡೆ ಇಟ್ಟುಕೊಂಡು ಪ್ರಧಾನಿ ನರೇಂದ್ರ ಮೋದಿ ಅವರ ಸರ್ಕಾರವನ್ನು ಟೀಕೆ ಮಾಡಿದರೆ ಏನು ಬರುತ್ತದೆ ಎಂದು ಅವರು ವಾಗ್ದಾಳಿ ನಡೆಸಿದ್ದಾರೆ.

**ಹಾಸನಕ್ಕೆ ಲಗ್ಗೆ :** ಹಾಸನ ಜಿಲ್ಲೆಗೆ ಲಗ್ಗೆ ಹಾಕಲು ಕಾಂಗ್ರೆಸ್ ಬಹಳ ವೇಗದಲ್ಲಿದೆ.ಯಾರೂ ಮಾಡದೇ ಇರುವ ಕಾರ್ಯ ಮಾಡಿದ್ದೇವೆ ಎಂಬ ಹೇಳಿಕೆ ನೀಡಿದ್ದಾರೆ. ಫಲಾನುಭವಿಗಳಿಗೆ ಎಲ್ಲವನ್ನೂ ನೀಡಿದ್ದೇವೆ ಎಂದು ಬಡಾಯಿ ಕೊಚ್ಚಿಕೊಳ್ಳುತ್ತಿದ್ದಾರೆ. ರೈತರ ಪರಿಸ್ಥಿತಿ ಧಾರುಣವಾಗಿದೆ. ರಾಜ್ಯದಲ್ಲಿ ಈ ಸರ್ಕಾರ ಬಂದಮೇಲೆ 2800ಕ್ಕೂ ಹೆಚ್ಚು ರೈತರು ಸಾವನ್ನಪ್ಪಿದ್ದಾರೆ.

ರಾಜಣ್ಣ ಅವರು ಸಹಕಾರ ಸಚಿವರಾಗಿದ್ದಾಗ ರೈತರಿಗೆ 24 ಸಾವಿರ ಕೋಟಿ ರೂ. ಸಾಲ ಕೊಡ್ತೆ?ವೆ ಎಂದು ಹೇಳಿದ್ದರು. ಈಗ 12 ಸಾವಿರ ಕೋಟಿ ರೂ. ಕೊಟ್ಟಿದ್ದೇವೆ ಎನ್ನುತ್ತಾರೆ. ನಾನು ಮುಖ್ಯಮಂತ್ರಿಯಾಗಿದ್ದಾಗ ರೈತರ ಸಾಲ ಮನ್ನಾ ಮಾಡಿದ್ದೇನೆ. ಅದರಿಂದಾಗಿ 12 ಬ್ಯಾಂಕ್‌ಗಳು ಉಳಿದುಕೊಂಡವು. ಈ ಬಗ್ಗೆ ಶ್ವೇತ ಪತ್ರ ಹೊರಡಿಸಲಿ ಎಂದು ಅವರು ಸವಾಲು ಹಾಕಿದ್ದಾರೆ.

ಶಾಸಕರಾದ ಸಿ.ಎನ್. ಬಾಲಕೃಷ್ಣ, ಸ್ವರೂಪ್ ಪ್ರಕಾಶ್, ಮಾಜಿ ಶಾಸಕ ಲಿಂಗೇಶ್, ಒಕ್ಕಲಿಗರ ಸಂಘದ ರಾಜ್ಯ ಘಟಕದ ನಿರ್ದೇಶಕ ರಘು ಗೌಡ ,ಜಿಲ್ಲಾ ಪಂಚಾಯ್ತಿ ಮಾಜಿ ಅಧ್ಯಕ್ಷ ಸತ್ಯನಾರಾಯಣ, ಜೆಡಿಎಸ್ ಮುಖಂಡರಾದ ಪರಮ ದೇವರಾಜೇಗೌಡ ಇತರರು ಈ ಸಂದರ್ಭದಲ್ಲಿದ್ದರು.

## ಜ.1 ರಂದು ತಾಲೂಕಿಗೆ ಆಗಮಿಸುವ ತುಂಗಾಭದ್ರಾ ಉಳಿಸಿ ಪಾದಯಾತ್ರೆಯನ್ನು ಯಶಸ್ವಿಗೊಳಿಸೋಣ:ಹಂಪಯ್ಯನಾಯಕ

ನಾಯ್ಡು ಮಾತನಾಡಿ ಪಶ್ಚಿಮಘಟದಲ್ಲಿ ಹುಟ್ಟುವ 12 ಉಪನದಿಗಳು ಸೇರಿಕೊಂಡು ತುಂಗಭದ್ರನದಿ ಹರಿಯುತ್ತದೆ ಇತ್ತೀಚಿನ ದಿನಗಳಲ್ಲಿ ಪಶ್ಚಿಮಘಟದಲ್ಲಿನ ದಟ್ಟ ಅರಣ್ಯಗಳ ನಾಶ,ನದಿಗೆ ಭಾರಿ ಪ್ರಮಾಣದಲ್ಲಿ ತ್ಯಾಜ್ಯಗಳನ್ನು ಹಾಕುತ್ತಿರುವುದು, ಪಶ್ಚಿಮಘಟದಲ್ಲಿ ಧಾರಣೆಗೆ ಮೀರಿದ ವಿವಿಧ ಯೋಜನೆಗಳಿಂದ ನದಿಯ ಪ್ರಮಾಣದಲ್ಲಿ ಕುಗ್ಗುತ್ತಿರುವುದನ್ನು ಹಾಗೂ ಕಲುಷಿತವಾಗುತ್ತಿರುವುದನ್ನು ತಜ್ಞರು ಕಂಡುಕೊಂಡಿದ್ದು ಸರ್ಕಾರದ ಗಮನಕ್ಕೆ ಹಾಗೂ ಜನರಲ್ಲಿ ಜಾಗೃತಿ ಮೂಡಿಸುವುದಕ್ಕಾಗಿ ನಿರ್ಮಲ ತುಂಗಭದ್ರಾ ಅಭಿಯಾನವನ್ನು ಶೃಂಗೇರಿಯಿಂದ ಶ್ರೀಶೈಲದವರೆಗೆ ಹಮ್ಮಿಕೊಂಡಿದ್ದು 3 ನೇ ಹಂತದಲ್ಲಿ ಜ,31 ರಂದು ಮಾನ್ವಿ ತಾಲೂಕಿಗೆ ಪೋತ್ನಾಳ್ ಗ್ರಾಮದ ಮೂಲಕ ಪ್ರವೇಶಿಸಲಿದ್ದು ಗ್ರಾಮದಲ್ಲಿನ ಶಾಲಾ ಕಾಲೇಜುಗಳಲ್ಲಿ ಹಾಗೂ ಸಾರ್ವಜನಿಕ ಪ್ರದೇಶಗಳಲ್ಲಿ ದೃಶ್ಯಮಾಧ್ಯಮಗಳನ್ನು ಬಳಸಿ ಜಾಗೃತಿ ಮೂಡಿಸಲಾಗುವುದು. ನಂತರ ಪಾದಯಾತ್ರೆ ಮೂಲಕ ಹಿರೆಕೋಟ್ನೆಕಲ್ ಗ್ರಾಮವನ್ನು ತಲುಪುವುದು. ರಾತ್ರಿ ಚೀಕಲಪರ್ವಿ ಗ್ರಾಮದಲ್ಲಿನ ತುಂಗಭದ್ರ ನದಿಗೆ ತುಂಗಭದ್ರ ಅರತಿ ಪೂಜೆ ಸಲ್ಲಿಸಲಾಗುವುದು. ಜ.1 ರಂದು ಮಧ್ಯಾಹ್ನ 1 ಗಂಟೆಗೆ ಮಾನ್ವಿ ಪಟ್ಟಣಕ್ಕೆ ಪಾದಯಾತ್ರೆ ಆಗಮಿಸಲಿದ್ದು ಬಹಿರಂಗ ಸಭೆ ನಡೆಸಲಾಗುವುದು. ಶಾಲಾ,ಕಾಲೇಜುಗಳ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಲಾಗುವುದು.ಜ.2 ರಂದು ಮಾನ್ವಿಯಿಂದ ರಾಜಲಬಂಡೆ ಗ್ರಾಮದವರೆಗೆ ಪಾದಯಾತ್ರೆ ನಡೆಸಲಾಗುವುದು.ಜ.3 ರಂದು ರಾಜಲಬಂಡೆ ಗ್ರಾಮದಿಂದ ಬಿಚ್ಚಾಲೆ ಗಿಲೇಸೂಗೂರು ಮೂಲಕ ಮಂತ್ರಾಲಯದ ವರೆಗೆ ಪಾದಯಾತ್ರೆ ನಡೆಯುತ್ತದೆ. ಆ.4 ರಂದು ಮಂತ್ರಾಲಯದಲ್ಲಿ 4 ನೇ ಹಂತದ ಶ್ರೀಶೈಲದವರೆಗಿನ ಪಾದಯಾತ್ರೆಗೆ ಆಂಧ್ರಪ್ರದೇಶ ಉಪಮುಖ್ಯಮಂತ್ರಿ ಪವಾನ್ ಕಲ್ಯಾಣ ಚಾಲನೆ ನೀಡಲಿದ್ದಾರೆ. ಪಾದಯಾತ್ರೆಯುಲ್ಲಿ ನಾಡಿನ ಹೆಸರಾಂತ ಗಣ್ಯರು,ಬುದ್ದಿಜೀವಿಗಳು,ಸಾಹಿತಿಗಳು,ವಿವಿಧ ಮಠಗಳ ಶ್ರೀಗಳು,ರೈತರು ,ವಿದ್ಯಾರ್ಥಿಗಳು ಭಾಗವಹಿಸಲಿದ್ದಾರೆ.ತುಂಗಭದ್ರ ನದಿ ಹರಿಯುವ ವಿವಿಧ ಪ್ರದೇಶಗಳಲ್ಲಿ ನದಿಯ ನೀರಿನ ಮಾದರಿಯನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಿ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಸಭೆಯಲ್ಲಿ ಮಾಜಿ ಶಾಸಕರಾದ ಬಸವನಗೌಡ ಬ್ಯಾಗವಾಟ,ಗಂಗಾಧರನಾಯಕ, ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಾಫೂರ್ ಸಾಬ್, ಬಿ.ಕೆ.ಅಮರೇಶಪ್ಪ, ಮಲ್ಲಯ್ಯಗೌಡ ಗಣೆಕಲ್, ಜಿ.ಸುಧಾಕರ,ರಾಯಚೂರು ಜಿಲ್ಲಾ ಸಂಚಲಾಕರಾದ ಉದಯಕುಮಾರ ಸಾಹುಕರ್,ಆನಿತಾ ನವಲಕಲ್,ಅರುಣಚಂದಾ,ಹರಿಹರ ಪಾಟೀಲ್, ಶ್ರೀಧರಸ್ವಾಮಿ, ತಿಮ್ಮರೆಡ್ಡಿಭೋಗವತಿ,ರಾಘವೇಂದ್ರ ಚೌಡ್ಕಿ,ಮಂಜುನಾಥ, ಕೃಪಾಸಾಗರ ಸೇರಿದಂತೆ ಇನ್ನಿತರರು ಇದ್ದರು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ
9743497111, 9743496111




**ಮಾನ್ವಿ,ಡಿ.22**–ಭಾನುವಾರ ನಡೆದ ರಾಷ್ಟ್ರೀಯ ಪಲ್ಸ್ ಪೋಲಿಯೋ ಕಾರ್ಯಕ್ರಮದ ಅಂಗವಾಗಿ ಮಾನ್ವಿ ನಗರದಾದ್ಯಂತ ತಾಲೂಕ ಆರೋಗ್ಯ ಇಲಾಖೆಯ ಸಂಯೋಗದೊಂದಿಗೆ ತಾಲೂಕಿನ ಸರ್ವೋದಯ ಶಿಕ್ಷಣ ಸಂಸ್ಥೆಯ ನರ್ಸಿಂಗ್ ಹಾಗೂ ಪ್ಯಾರಾ ಮೆಡಿಕಲ್ ಕಾಲೇಜಿನ 5 ಪ್ರಾಧ್ಯಾಪಕರು ಹಾಗೂ 85 ವಿದ್ಯಾರ್ಥಿಗಳು ಮಾನ್ವಿ ಪಟ್ಟಣದ 30 ಪಲ್ಸ್ ಪೋಲಿಯೋ ಬೂತ್‌ಗಳಲ್ಲಿ ಭಾಗವಹಿಸಿ ಮೊದಲದಿನದ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

## ಚೆಕ್ ಡ್ಯಾಂ: ರೂ. 100 ಕೋಟಿ ವೆಚ್ಚದ ಪೈಲಟ್ ಯೋಜನೆಗೆ ರೂಪುರೇಷೆ ಸಿದ್ಧ:ಎಂ. ಬಿ. ಪಾಟೀಲ



**ವಿಜಯಪುರ, ಡಿ. 22:** ಹಳ್ಳಗಳಲ್ಲಿ ಹೂಳು ತೆಗೆದು ಮಳೆಗಾಲದಲ್ಲಿ ನೀರು ಸಂಗ್ರಹಿಸಿ ಬೇಸಿಗೆಯಲ್ಲಿ ಸದ್ಬಳಕೆ ಮಾಡಲು ಚೆಕ್ ಡ್ಯಾಂ ನಿರ್ಮಿಸುವ ರೂ. 100 ಕೋಟಿ ವೆಚ್ಚದ ಪೈಲಟ್ ಯೋಜನೆಗೆ ರೂಪುರೇಷೆ ಸಿದ್ಧಪಡಿಸಲಾಗಿದೆ ಎಂದು ಎಂದು ಕೈಗಾರಿಕೆ, ಮೂಲಸೌಲಭ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಂ. ಬಿ. ಪಾಟೀಲ ಹೇಳಿದ್ದಾರೆ. ರವಿವಾರ ತಿಕೋಟಾದ ಹಳಚಾಪುರ ರಸ್ತೆಯ ಸಾತಲಿಂಗಯ್ಯ ಸಾಲಿಮಠ ಅವರ ತೋಟದಲ್ಲಿ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ ತಿಕೋಟಾ ತಾಲೂಕು ಘಟಕದಿಂದ ಆಯೋಜಿಸಿದ ರೈತ ಕ್ಷೇತ್ರೋತ್ಸವ ಮತ್ತು ಜಿಲ್ಲೆಯ ಸಮಸ್ತ ಕಬ್ಬು ಬೆಳೆಗಾರರಿಗೆ ವಿಶೇಷ ತಜ್ಞರಿಂದ ಚಿಂತನಗೋಷ್ಠಿ, ಕೃಷಿಗೆ ಸಂಬಂಧಿಸಿದಂತೆ ಉಪನ್ಯಾಸ ಮತ್ತು ಕೃಷಿ ಉತ್ಪನ್ನಗಳಿಂದ ತುಲಾಭಾರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

ಬಬಲೇಶ್ವರ ಮತ್ತು ತಿಕೋಟಾ ತಾಲೂಕುಗಳಲ್ಲಿ 67 ಹಳ್ಳಗಳಿಗೆ 206 ಚೆಕ್ ಡ್ಯಾಂ ನಿರ್ಮಿಸಲಾಗುವುದು. ಇದರಿಂದ ಅಂತರ್ಜಲವೂ ಹೆಚ್ಚಾಗಲಿದೆ ಎಂದು ಅವರು ತಿಳಿಸಿದರು.

ಕಬ್ಬು ಮತ್ತು ಸಕ್ಕರೆ ಬೆಲೆ ನಿರ್ಧಾರ,

ಎಥೆನಾಲ್ ಖರೀದಿ ಹಾಗೂ ಬೆಂಬಲ ಬೆಲೆ ನಿಗದಿ ವಿಷಯಗಳೂ ಕೂಡ ಕೇಂದ್ರ ಸರಕಾರ ವ್ಯಾಪ್ತಿಯಲ್ಲಿ ನಿರ್ಧಾರವಾಗುತ್ತವೆ. ಆದರೂ ರಾಜ್ಯ ಸರಕಾರ ರೈತರ ಹಿತ ಕಾಪಾಡಲು ಬದ್ಧವಾಗಿದೆ. ತಿಕೋಟಾ– ಹಳಚಾಪುರ ರಸ್ತೆಯನ್ನು ರೂ. 3.50 ಕೋ. ವೆಚ್ಚದಲ್ಲಿ ಅಭಿವೃದ್ಧಿ ಪಡಿಸಲಾಗುವುದು. ರೂ. 350 ಕೋ. ವೆಚ್ಚದಲ್ಲಿ 750 ಕಿ. ಮೀ. ಹೊಲಗಾಲುವೆ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುತ್ತಿದೆ. ರೈತರು ಹಂತಹಂತವಾಗಿ ಸಾವಯವ ಕೃಷಿ ಅಳವಡಿಸಿಕೊಳ್ಳಬಹುದು. ಹನಿ ನೀರಾವರಿ ಮೂಲಕ ಕಬ್ಬು ಬೆಳೆದರೆ ನೀರು ಉಳಿತಾಯ, ಇಳುವರಿ ಹೆಚ್ಚಳ, ಕೃಷಿ ಭೂಮಿಯ ಗುಣಮಟ್ಟ ಉಳಿಸಿಕೊಳ್ಳಲು ಸಾಧ್ಯ. ರೈತರಿಗೆ ಹನಿ ನೀರಾವರಿ ಸಲಕರಣೆ ಒದಗಿಸಲು ಸಕ್ಕರೆ ಕಾರ್ಖಾನೆಗಳ ಜೊತೆಗೆ ಒಡಂಬಡಿಕೆ ಮಾಡಿಕೊಳ್ಳಲು ರೂಪುರೇಷೆ ಸಿದ್ಧಪಡಿಸಲಾಗುವುದು. ಬಾಬಾನಗರ ಬಳಿ ರೂ. 567 ಕೋ. ವೆಚ್ಚದಲ್ಲಿ ಬೃಹತ್ ಜಲಸಂಗ್ರಹಾಲಯ ನಿರ್ಮಿಸಲಾಗುತ್ತಿದೆ. ರೈತರ ಬಾಳು ಹಸನಾಗಿಸಲು ಸಕಲ ಯೋಜನೆಗಳನ್ನು ಕೈಗೊಳ್ಳಲಾಗುವುದು ಎಂದು ಅವರು ಹೇಳಿದರು.

ಬಂಗಾರಕ್ಕಿಂತ ಕೃಷಿ ಉತ್ಪನ್ನಗಳಿಂದ ತುಲಾಭಾರ ಮಾಡಿರುವುದು ಅತೀವ ಸಂತಸ ತಂದಿದೆ ಎಂದು ಸಚಿವರು ಇದೇ ವೇಳೆ ತಿಳಿಸಿದರು.

ರೈತ ಸಂಘ ಮತ್ತು ಹಸಿರು ಸೇನೆ ರಾಜ್ಯಾಧ್ಯಕ್ಷ ಚುನ್ನಪ್ಪ ಪೂಜೇರಿ ಮಾತನಾಡಿ, ಕುಡಿಯುವ ನೀರಿಗೂ ಪರದಾಡುತ್ತಿದ್ದ ವಿಜಯಪುರ ಜಿಲ್ಲೆಯಲ್ಲಿ ಈಗ ನೀರಾವರಿ ಮಾಡಿದ್ದಾರೆ. ರೈತರ ಬದುಕು ಹಸನಾಗಿಸಿದ್ದಾರೆ. ರಾಜ್ಯದಿಂದ ಸಂಗ್ರಹವಾಗುವ ತೆರಿಗೆಗೆ ತಕ್ಕಷ್ಟು ಕೇಂದ್ರ ಸರಕಾರ ಪರಿಹಾರ ನೀಡುತ್ತಿಲ್ಲ. ಸಚಿವರು ರೈತಪರ ಚಿಂತಕರಾಗಿದ್ದಾರೆ ಎಂದು ಹೇಳಿದರು.

ಸಂಘದ ತಾಲೂಕು ಘಟಕದ ಅಧ್ಯಕ್ಷ ಸಾತಲಿಂಗಯ್ಯ ಸಾಲಿಮಠ ಮಾತನಾಡಿ, ಹುಲ್ಲು ಕಡ್ಡಿ ಬೆಳೆಯದ ಈ ಭಾಗದಲ್ಲಿ ಈಗ ಕೊಳವೆ ಭಾವಿಗಳಲ್ಲಿ ನೀರು ಬಂದಿದೆ. ಕುಡಿಯುವ ನೀರಿಗಾಗಿ ಪರದಾಡುತ್ತಿದ್ದ ನಾವು ಇಂದು ಹೊಲದಲ್ಲಿ ಕಬ್ಬು ಬೆಳೆಯುತ್ತಿದ್ದೇವೆ. ನಮ್ಮ ಭಾಗದ ರೈತರ ಬಾಳು ಹಸನು ಮಾಡಿದ್ದಾರೆ. ಸಾಲ ಮಾಡುತ್ತಿದ್ದ ನಾವು ಬಂಗಾರದಂಥ ಬೆಳೆ ಬೆಳೆಯುತ್ತಿದ್ದೇವೆ. ಈ ಹಿನ್ನೆಲೆಯಲ್ಲಿ ಸಚಿವ ಎಂ. ಬಿ. ಪಾಟೀಲ ಅವರನ್ನು ಕೃಷಿ ಉತ್ಪನ್ನಗಳಿಂದ ತುಲಾಭಾರ ಮಾಡುವ ಕಾರ್ಯಕ್ರಮ ಆಯೋಜಿಸಿದ್ದೇವೆ ಎಂದು ಹೇಳಿದರು.

ಸಂಘದ ರಾಜ್ಯ ಗೌರವಾಧ್ಯಕ್ಷ ಶಶಿಕಾಂತ ಗುರೂಜಿ ಮಾತನಾಡಿ, ಸಚಿವ ಎಂ. ಬಿ. ಪಾಟೀಲರು ರಾಜಕೀಯದ ಜೊತೆಗೆ ಆಧ್ಯಾತ್ಮಿಕ ತತ್ವಗಳನ್ನು ಅಳವಡಿಸಿಕೊಂಡಿರುವ ಜಲನಾಯಕರಾಗಿದ್ದಾರೆ. ಶ್ರೀ ಸಿದ್ಧೇಶ್ವರ ಸ್ವಾಮೀಜಿ ಆಶೀರ್ವಾದ ಅವರ ಮೇಲಿದೆ. ಸಚಿವರ ವಿಚಾರಧಾರೆಗಳು ಇತರ ರಾಜಕಾರಣಿಗಳಿಗೆ ಮಾದರಿಯಾಗಿವೆ ಎಂದು ಹೇಳಿದರು.

ಗುಣದಾಳ ಕಲ್ಯಾಣ ಹಿರೇಮಠದ ಡಾ. ವಿವೇಕಾನಂದ ದೇವರು ಮಾತನಾಡಿ, ರೈತರು ಕೃಷಿಯೋಗಿಯಾಗಿದ್ದಾರೆ. ಇಂಥ ರೈತರಿಗೆ ನೀರು ಕೊಟ್ಟಿರುವ ಸಚಿವ ಎಂ. ಬಿ. ಪಾಟೀಲರಿಗೆ ಎಲ್ಲರ ಆಶೀರ್ವಾದ ಇರಲಿದೆ ಎಂದು ಹೇಳಿದರು.

ಶಿರಶ್ಯಾಡ ಹಿರೇಮಠದ ಶ್ರೀ ಅಭಿನವ ಮುರುಗೇಂದ್ರ ಶಿವಾಚಾರ್ಯರು ಮಾತನಾಡಿ, ಎಂ. ಬಿ. ಪಾಟೀಲರು ಆತ್ಮಬಲದಿಂದ ಈ ಭಾಗ ಹಸಿರಾಗಲು ನೀರಾವರಿ ಮೂಲಕ ಉಸಿರು ನೀಡಿದ್ದಾರೆ. ಸರ್ವರನ್ನು ಜೋಡಿಸುವ ಕೆಲಸ ಮಾಡುತ್ತಿದ್ದಾರೆ. ಜನಮಾನಸದಲ್ಲಿ ಅಚ್ಚಳಿಯದೇ ಉಳಿಯುವ ವ್ಯಕ್ತಿ ಮತ್ತು ಶಕ್ತಿಯಾಗಿದ್ದಾರೆ ಎಂದು ಹೇಳಿದರು.

ತಿಕೋಟಾ ಹಿರೇಮಠದ ಶಿವಬಸವ ಶಿವಾಚಾರ್ಯರು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ರೈತರು ಸಚಿವರನ್ನು ಅಡಕೆ, ಪಪ್ಪಾಯಿ, ಕಬ್ಬು, ಸೀತಾಫಲ, ಪೇರು, ದ್ರಾಕ್ಷಿ, ಮಣೂಕು, ಅಂಜೂರು ಹಾಗೂ ನೆಲ್ಲಿಕಾಯಿ ಕೃಷಿ ಉತ್ಪನ್ನಗಳಿಂದ ತುಲಾಭಾರ ಮಾಡಿದರು.

ಈ ಸಂದರ್ಭದಲ್ಲಿ ತಿಕೋಟಾ ಹಿರೇಮಠದ ಶ್ರೀ ಶಿವಬಸವ ಶಿವಾಚಾರ್ಯರು, ಶಿರಶ್ಯಾಡ ಹಿರೇಮಠದ ಶ್ರೀ ಅಭಿನವ ಮುರುಗೇಂದ್ರ ಶಿವಾಚಾರ್ಯರು, ಸಂಘದ ಜಿಲ್ಲಾಧ್ಯಕ್ಷ ಸಂಗಮೇಶ ಸಗರ, ಮುಖಂಡರಾದ ಸಿದ್ದು ಗೌಡನವರ, ಸೋಮನಾಥ ಬಾಗಲಕೋಟ, ಭೀಮರಾವ ಹಂಗರಗಿ, ಮಲ್ಲಿಕಾರ್ಜುನ ಹಂಜಗಿ, ಬಸಯ್ಯ ವಿಭೂತಿ, ಜಗದೀಶಗೌಡ ಪಾಟೀಲ, ವಿಜಯಕುಮಾರ ಪಾಟೀಲ, ಪ್ರತಿಭಾ ಜಗದೀಶಗೌಡ ಪಾಟೀಲ, ಶೋಭಾ ಹಲ್ಯಾಳ, ಲೇಪು ಕೊಣ್ಣೂರ, ಭಾಗೀರಥಿ ತೇಲಿ, ಸಿದಗೊಂಡ ರುದ್ರಗೌಡ, ನಾರಾಯಣ ಪರಮಾಜಿ, ಕಲ್ಲು ಸೊನ್ನದ, ರಾಹುಲ್ ಕುಬಕಡ್ಡಿ, ಗಿರೀಶ ಕುಲಕರ್ಣಿ, ಸಿದ್ರಾಮ ಪೂಜಾರಿ, ಸಿದ್ದಪ್ಪ ಭೊಸಗೊಂಡ, ರಾಮು ಮಾಳಿ, ಸಾಹೇಬಗೌಡ ಕೆಂಪವಾಡ, ಮಾನಿಂಗಪ್ಪ ಮಂಟೂರ, ಮಮ್ಮುಲಾಲ ಮುಜಾವರ, ಸದಾಶಿವಯ್ಯ ಅರಕೇರಿಮಠ,ಬಸವ ಟ್ರಾಯ್ ಶಿವಶಂಕ್ರಯ್ಯ ಮಠ, ಅಧಿಕಾರಿಗಳಾದ ಶಿವನಗೌಡ ಪಾಟೀಲ, ಸುರೇಶ ಚವಲರ, ಬಸವಂತರಾಯಗೌಡ ಬಿರಾದಾರ, ದೇವರಾಜ ಉಳ್ಳಾಗಡ್ಡಿ, ಮಂಜುನಾಥ ಜಾನಮಟ್ಟಿ, ಜಿ. ಎಸ್. ದೇಶಮುಖ, ಬಸನಗೌಡ ಪಾಟೀಲ, ಅಂಬಣ್ಣ ಹರಳಯ್ಯ, ಮಲ್ಲು ರಾಣಗಟ್ಟಿ, ರಘು ನಡುವಿನಮನಿ, ಗಿರಿಮಲ್ಲಯ್ಯ ಮಠಪತಿ, ಗಾಯತ್ರಿ ಹಟ್ಟಿಮಠ, ಶಿವಲೀಲಾ ಸಾಲಿಮಠ ಮುಂತಾದವರು ಉಪಸ್ಥಿತರಿದ್ದರು.

## ಅಂಬೇಡ್ಕರ್ ಯುವ ಸೇನೆಯ ಗ್ರಾಮ ಘಟಕ ಅಧ್ಯಕ್ಷರಾಗಿ ಭೀಮು ಮಲ್ಕಪಲ್ಲಿ ಆಯ್ಕೆ

**ಸೇಡಂ,ಡಿ ,22:**ಅಂಬೇಡ್ಕರ್ ಯುವ ಸೇನೆ ಸೇನೆಯ ರಾಜ್ಯಧ್ಯಕ್ಷರಾದ ಶ್ರೀಮತಿ ಕೌಶಲ್ಯ ಹೆಚ್ ಕೋದಂಡರಾಮ್ ಹಾಗೂ ಕಲಬುರಗಿ ಜಿಲ್ಲೆ ಅಧ್ಯಕ್ಷರಾದ ಮಲ್ಲಿಕಾರ್ಜುನ ಎ.ತಳಕೇರಿ ಸೇಡಂ ತಾಲೂಕ ಅಧ್ಯಕ್ಷ ಗೋಪಾಲ ನಾಟೇಕರ್ ರವರ ಆದೇಶದ ಮೇರೆಗೆ ಯುವ ಉತ್ಸಾಹಿ ಸಮಾಜ ಸೇವಕ ಮತ್ತು ಹಿಂದೆ ಅನೇಕ ದಲಿತಪರ ಹೋರಾಟಗಳಲ್ಲಿ ಹೋರಾಡುತ್ತಿರುವ ಮಲ್ಕಪಲ್ಲಿ ಗ್ರಾಮದ ಭೀಮು ಮಾಲ್ಕಪಲ್ಲಿ ಅವರನ್ನು ಗ್ರಾಮ ಘಟಕದ ಅಧ್ಯಕ್ಷರಾಗಿ ಆಯ್ಕೆ ಮಾಡಲಾಗಿದೆ ಹಾಗೂ ಉಪಾಧ್ಯಕ್ಷರಾಗಿ ಲಾಲಪ್ಪ ಮಲ್ಕಪಲ್ಲಿ ಪ್ರಧಾನ ಕಾರ್ಯದರ್ಶಿಯಾಗಿ ಮೌನೇಶ್ ಮಲ್ಕಪಲ್ಲಿ ಅವರನ್ನು ನೇಮಕ ಮಾಡಿ ಆದೇಶಿಸಲಾಗಿದೆ ಎಂದು ತಾಲೂಕ ಅಧ್ಯಕ್ಷ ಗೋಪಾಲ ನಾಟೇಕರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಯುವ ಮಾರ್ಗ
www.yuvamarga.com Yuva Marga yuva_marga_

# ಮಣಿಪುರದಲ್ಲಿ ಶಾಂತಿಸ್ಥಾಪನೆ ಸಮಯ ತೆಗೆದುಕೊಳ್ಳುತ್ತದೆ : ಮೋಹನ್ ಭಾಗವತ್



**ಕೋಲ್ಕತ್ತಾ, ಡಿ. 22–** ಜನಾಂಗೀಯ ಕಲಹದಿಂದ ಪೀಡಿತ ಮಣಿಪುರ(ಒಚಿಟಿಟಿಡಿ)ದಲ್ಲಿ ಹೋರಾಡುತ್ತಿರುವ ಪಕ್ಷಗಳ ನಡುವಿನ ಭಿನ್ನಾಭಿಪ್ರಾಯಗಳನ್ನು ಪರಿಹರಿಸಲು ಸಮಯ ತೆಗೆದುಕೊಳ್ಳುತ್ತದೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ (Mohan Bhagwat) ಹೇಳಿದ್ದಾರೆ, ಇದೇ ಸಂದರ್ಭದಲ್ಲಿ ಅವರು ಈಶಾನ್ಯ ರಾಜ್ಯದಲ್ಲಿ ಅಂತಿಮವಾಗಿ ಶಾಂತಿ ನೆಲೆಸುತ್ತದೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದ್ದಾರೆ.

ಇತ್ತೀಚೆಗೆ ಮಣಿಪುರಕ್ಕೆ ಭೇಟಿ ನೀಡಿದ ಭಾಗವತ್, ರಾಜ್ಯದ ಎಲ್ಲಾ ಬುಡಕಟ್ಟು ಮತ್ತು ಸಾಮಾಜಿಕ ನಾಯಕರು ಹಾಗೂ ಯುವ ಪ್ರತಿನಿಧಿಗಳೊಂದಿಗೆ ಮಾತುಕತೆ ನಡೆಸಿದ್ದೇನೆ ಎಂದು ಹೇಳಿದರು.ಅವ್ಯವಸ್ಥೆಗಳು, ಮುಖ್ಯವಾಗಿ ಕಾನೂನು ಮತ್ತು ಸುವ್ಯವಸ್ಥೆ ಸಮಸ್ಯೆಗಳು ನಿಧಾನವಾಗಿ ಕಡಿಮೆಯಾಗುತ್ತಿವೆ ಮತ್ತು ಸುಮಾರು ಒಂದು ವರ್ಷದೊಳಗೆ ಕೊನೆಗೊಳ್ಳುತ್ತವೆ ಎಂದು ಅವರು ಹೇಳಿದರು.

ಆದರೆ ಮನಸ್ಸುಗಳಿಗೆ ಸೇತುವೆಯಾಗುವುದು ಒಂದು ದೊಡ್ಡ ಕೆಲಸ, ಮತ್ತು ಇದು ಸಮಯ ತೆಗೆದುಕೊಳ್ಳುತ್ತದೆ ಎಂದು ಅವರು ಹೇಳಿದರು, ಸಂಭಾಷಣೆ ನಡೆಸುವುದು ಮತ್ತು ಹೋರಾಡುತ್ತಿರುವ ಪಕ್ಷಗಳನ್ನು ಒಂದು ಪುಟಕ್ಕೆ ತರುವುದು ಒಂದೇ ಮಾರ್ಗ ಎಂದು ಪ್ರತಿಪಾದಿಸಿದರು.ಅದನ್ನು ಮಾಡಬಹುದು, ಏಕೆಂದರೆ ಮೂಲತಃ ಚೈತನ್ಯ ಈಗಾಗಲೇ ಇದೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥರು ಸಂಘದ ಶತಮಾನೋತ್ಸವವನ್ನು ಆಚರಿಸಲು ಇಲ್ಲಿ ನಡೆದ ಕಾರ್ಯಕ್ರಮದಲ್ಲಿ ಹೇಳಿದರು.

ನಾವು ಅರುಣಾಚಲ, ಮೇಘಾಲಯದಲ್ಲಿ ಇದನ್ನು ಮಾಡಬಹುದು, ನಾಗಾಲ್ಯಾಂಡ್ ಮತ್ತು ಇತರ ಸ್ಥಳಗಳಲ್ಲಿ ನಾವು ಇದನ್ನು ಮಾಡುತ್ತಿದ್ದೇವೆ ಎಂದು ಅವರು ಹೇಳಿದರು.ಮಣಿಪುರದಲ್ಲಿ ಆರ್‌ಎಸ್‌ಎಸ್ ಸುಮಾರು 100 ಶಾಖೆಗಳನ್ನು ಹೊಂದಿದೆ ಎಂದು ಭಾಗವತ್ ಹೇಳಿದರು.ಮಣಿಪುರದಲ್ಲಿ ಅಂತಿಮವಾಗಿ ಶಾಂತಿ ನೆಲೆಸುತ್ತದೆ ಎಂದು ಅವರು ಹೇಳಿದರು, ಆದರೆ ಖಂಡಿತವಾಗಿಯೂ ಇದು ಸಮಯ ತೆಗೆದುಕೊಳ್ಳುತ್ತದೆ.

ಉಪನ್ಯಾಸ ಮತ್ತು ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಿದವರಲ್ಲಿ ಒಬ್ಬರು ಬಿಜೆಪಿಯ ಉನ್ನತ ನಾಯಕತ್ವದಿಂದ ಸಂಘವು ಏಕೆ ಅಂತರ ಕಾಯ್ದುಕೊಳ್ಳುತ್ತಿದೆ ಎಂದು ಕೇಳಿದಾಗ, ಆರ್‌ಎಸ್‌ಎಸ್ ಮುಖ್ಯಸ್ಥರು, ಸಂಘವು ಯಾವಾಗಲೂ ಕೇಸರಿ ಪಕ್ಷದಿಂದ ಅಂತರ ಕಾಯ್ದುಕೊಂಡಿದೆ ಎಂದು ಹೇಳಿದರು.

ನಾವು ಎಲ್ಲಾ ಬಿಜೆಪಿ ನಾಯಕರಿಂದ ಬಹಳ ದೂರ ಇರುತ್ತೇವೆ ಎಂದು ಅವರು ಹೇಳಿದರು, ನಾವು ಯಾವಾಗಲೂ ನರೇಂದ್ರ ಭಾಯಿ (ಪಿಎಂ ಮೋದಿ), ಅಮಿತ್ ಭಾಯಿ (ಕೇಂದ್ರ ಗೃಹ ಸಚಿವ ಶಾ) ಅವರಿಗೆ ಹತ್ತಿರವಾಗಿದ್ದೇವೆ ಎಂದು ಸೇರಿಸಲು ಆತುರಪಟ್ಟರು. ಇಬ್ಬರೂ ನಾಯಕರು ಸಂಘಕ್ಕೆ ಹತ್ತಿರವಾಗಿದ್ದಾರೆ ಮತ್ತು ಪ್ರಧಾನಿ ಮೋದಿ ಈ ಹಿಂದೆ ಸಂಘಟನೆಯ ಪ್ರಚಾರಕರಾಗಿದ್ದರು.

ಆರ್‌ಎಸ್‌ಎಸ್ ಮತ್ತು ಬಿಜೆಪಿ ನಾಯಕತ್ವದ ನಡುವಿನ ಸಂಬಂಧಗಳ ಕುರಿತು ಅಂತಹ ನಿರೂಪಣೆಗಳನ್ನು ಗಣನೆಗೆ ತೆಗೆದುಕೊಳ್ಳಬಾರದು ಎಂದು ಅವರು ಹೇಳಿದರು, ಸಂಘವು ಯಾವುದೇ ರಾಜಕೀಯ ಸಂಘಟನೆಯೊಂದಿಗೂ ತನ್ನ ಸಂಬಂಧವನ್ನು ಮರೆಮಾಡುವುದಿಲ್ಲ ಎಂದು ಅವರು ನುಡಿದರು.

# ಒಳ ಮೀಸಲಾತಿಗಾಗಿ ಕಾಂಗ್ರೆಸ್‌ನಿಂದ ಮಹಾ ಮೋಸ: ಕಾರಜೋಳ




**ಬೀದರ್: ಡಿ.22–**2013 ಹಾಗೂ 2023ರ ಚುನಾವಣೆ ಸಂದರ್ಭದಲ್ಲಿ ಕಾಂಗ್ರೆಸ್ ಪಕ್ಷವು ದಲಿತರ ಮತ ಕಬಳಿಸಲು ಒಳ ಮೀಸಲಾತಿ ಜಾರಿ ಮಾಡುವುದಾಗಿ ಹೇಳಿ ತನ್ನ ಚುನಾವಣೆ ಪ್ರಣಾಳಿಕೆಯಲ್ಲಿ ಅದನ್ನು ಸೇರಿಸಿರುವ ಕಾಂಗ್ರೆಸ್ ಪಕ್ಷ ಅದನ್ನು ಇಲ್ಲಿಯ ವರೆಗೂ ಒಂದಾದರ ಮೇಲೊಂದು ಗೊಂದಲ ಸೃಷ್ಟಿಸಿಟ್ಟು ಜಾತಿ ಜಾತಿಗಳ ನಡುವ ಸಂಘರ್ಷ ಏರ್ಪಡಲು ವೇದಿಕೆ ಸಿದ್ಧಪಡಿಸಿ ದಲಿತರಿಗೆ ಮಹಾ ಮೋಸ ಮಾಡಿದೆ ಎಂದು ಮಾಜಿ ಉಪ ಮುಖ್ಯಮಂತ್ರಿಗಳು ಹಾಗೂ ಹಾಲಿ ಸಂಸದ ಗೋವಿಂದ ಕಾರಜೋಳ ಆರೋಪಿಸಿದರು.

ರವಿವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿ, 1950ರಲ್ಲಿ ಪರಿಶಿಷ್ಟ ಜಾತಿ ಪಟ್ಟಿಯಲ್ಲಿ 6, ಪರಿಶಿಷ್ಟ ಪಂಗಡ ಯಾದಿಯಲ್ಲಿ 3 ಜಾತಿಗಳನ್ನು ಮಾತ್ರ ಸೇರಿಸಲಾಗಿತ್ತು. ಆದರೆ ಈಗ ಎಸ್.ಸಿ ಜಾತಿಯಲ್ಲಿ 101 ಹಾಗೂ ಎಸ್.ಟಿ ಜಾತಿಯಲ್ಲಿ 56 ಜಾತಿಗಳನ್ನು ಸೇರಿಸಲಾಗಿದೆ. ಸರ್ವೋಚ್ಛ ನ್ಯಾಯಾಲಯದ ಆದೇಶದಂತೆ ಹರಿಯಾಣ, ತೆಲಂಗಾಣಾ, ಪಂಜಾಬ, ತಮಿಳುನಾಡು ಹಾಗೂ ಆಂದ್ರ ಪ್ರದೇಶ ಸರ್ಕಾರಗಳು ಒಳ ಮೀಸಲಾತಿ ಜಾರಿ ಮಾಡಿವೆ. ಆದರೆ ಇಲ್ಲಿಯ ರಾಜ್ಯ ಸರ್ಕಾರ ಮೀನಾಮೇಷ ಏಣಿಸುತ್ತ 25 ಆಗಸ್ಟ್ ಕ್ಯಾಬಿನೆಟ್‌ನಲ್ಲಿ ಜಾರಿ ಮಾಡಿದರೂ ಒಂದಲ್ಲೊಂದು ಗೊಂದಲ ಸೃಷ್ಟಿ ಮಾಡಿಟ್ಟಿದ್ದಾರೆ.ಎ.ಕೆ, ಎ.ಡಿ ಅವರ ಮೀಸಲಾತಿ ಪ್ರಮಾನ 1 ಪ್ರತಿಶತ ಇದ್ದುದು ತೆಗೆದು ಹಾಕಿ ಅವರಿಗೆ ಅನ್ಯಾಯ ಎಸಗಲಾಗಿದೆ. 59 ಪಂಗಡಗಳು ತಮಗೆ ಮೋಸ ಆಗಿದೆ ಎಂದು ಕೋರ್ಟ್ ಮೆಟ್ಟಿಲೇರಿರುವರು. ಹೀಗೆ ದಿನಕ್ಕೊಬ್ಬರು ಕೋರ್ಟ್ಗೆ ಹೋಗಲಿ, ಪರಸ್ಪರ ಜಗಳಾಡಲಿ ಇದರಿಂದ ತಮಗೆ ಲಾಭ ಎಂದುಕೊಂಡು ಕಾಂಗ್ರೆಸ್ ಸರ್ಕಾರ ಹೊರಟಿದೆ. ಸಮಾಜ ಕಲ್ಯಾಣ ಸಚಿವ ಮಹಾದೇವಪ್ಪ ಅವರ ಅಣತಿಯಂತೆ ಸಿದ್ಧರಾಮಯ್ಯ ನಡೆದುಕೊಳ್ಳುತ್ತಿದ್ದಾರೆ. ಈ ತಿಂಗಳ 18ರಂದು ಬೆಳಗಾವಿ ಅಧಿವೇಶನದಲ್ಲಿ ಇದಕ್ಕೆ ಸಂಬಂಧಪಟ್ಟಂತೆ ಪ್ರತ್ಯೇಕ್ ಬಿಲ್ ಮಂಡಿಸಿ ಚರ್ಚೆ ಮಾಡದೇ ಪಾಸ್ ಮಾಡಿರುವುದು ಅತ್ಯಂತ ದುರಂತದ ಸಂಗತಿ. ಈ ಮಸುದೆಯಲ್ಲಿ ಒಳ ಮೀಸಲಾತಿಯಂತೆ ನೇರ ನೇಮಕಾತಿ ಮಾಡಿ ಪದೋನ್ನತೆ ಮಾಡದೇ ಇರುವ ಮೂಲಕ ಸಂವಿಧಾನದ ಆಶೆಯವನ್ನು ಗಾಳಿಗೆ ತೂರಿ ದಲಿತರನ್ನು ಸದಾ ಮೋಸ ಮಾಡುತ್ತ ಸಾಗಿದ್ದಾರೆ ಎಂದು ದೂರಿದರು.

ದಲಿತರ ಓಟ್ ಬ್ಯಾಂಕ್‌ನಿಂದ 60 ವರ್ಷಗಳ ಕಾಲ ಈ ದೇಶದಲ್ಲಿ ಅಧಿಕಾರ ಹಿಡಿದಿರುವ ಕಾಂಗ್ರೆಸ್ ಪಕ್ಷ ದಲಿತರನ್ನು ಸದಾ ಒಂದಲ್ಲ ಒಂದು ರೀತಿಯಲ್ಲಿ ಅವಮಾನ ಮಾಡುವುದೇ ಅವರ ಪರಮ ಧ್ಯೆಯವಾಗಿದೆ. 39 ಸಾವಿರ ಕೋಟಿ ರೂಪಿಯಿ ಎಸ್.ಪಿ, ಟಿ.ಎಸ್.ಪಿ ಹಣ ಗ್ಯಾರಂಟಿಗಳಿಗೆ ಬಳಿಸಿ ದಲಿತರ ಹಕ್ಕು ನಿರ್ನಾಮ ಮಾಡಲು ಹೊರಟಿದ್ದಾರೆ. ಅಧಿಕಾರ ಹಿಡಿಯಲು ಈ ಸಾರಿ ಗ್ಯಾರಂಟಿ ನೆಪದಲ್ಲಿ ಬಡವರಿಗೆ ವಂಚಿಸಿ ಅಧಿಕಾರ ಗಿಟ್ಟಿಸಿದ್ದಿರಿ. ಕೂರ್ಚಿಗಾಗಿ ನಿತ್ಯ ಸಿದ್ಧರಾಮಯ್ಯ ಹಾಗೂ ಡಿ.ಕೆ ಶಿವಕುಮಾರ ಗೊಂದಲದ ಹೇಳಿಕೆ ನೀಡುವ ಮೂಲಕ ಈ ರಾಜ್ಯವನ್ನು ಅಭಿವೃದ್ಧಿಯುತ್ತ ಕೊಂಡೊಯ್ಯದೇ ಅಧಿಕಾರಹಪಾಹಪಿಸುತ್ತಿದ್ದಾರೆ. ಹಿಂದೆ ನಮ್ಮ ಸರ್ಕಾರ ಅಧಿಕಾರದಲ್ಲಿದ್ದಾಗ ಜನರಿಗೆ ಭರವಸೆ ನೀಡದಿದ್ದರೂ ದಲಿತರ ಹಿತ ಗಮನದಲ್ಲಿರಿಸಿ 15 ಪ್ರತಿಶತ ಇದ್ದ ಮೀಸಲಾತಿ 17ಕ್ಕೆ ಹಾಗೂ ಪರಿಶಿಷ್ಟ ಪಂಗಡ ಒಳ ಮೀಸಲಾತಿ ಪ್ರಮಾಣ 5 ಇದ್ದುದು 7ಕ್ಕೆ ಏರಿಸಲಾಗಿತ್ತು. ಆದರೆ ಈ ಸರ್ಕಾರ ದಲಿತರಿಗೆ ದಾರಿ ತಪ್ಪಿಸಲು ಮೀಸಲಾತಿ ಪ್ರಮಾಣ ಮೀರಿ ಪ್ರತಿಯೊಬ್ಬರು ಕೋರ್ಟ್ ಮೆಟ್ಟಿಲೇರುವಂತೆ ಮಾಡುತ್ತಿದೆ. ಈಗಾಗಲೆ ಸದಾಶಿವ ಆಯೋಗ ಜಾರಿ ಮಾಡದೆ ನಾಗಮೋಹನದಾಸ ಆಯೋಗ ರಚಿಸಿದೆ. ನಾಗಮೋಹನದಾಸ ವರದಿ ಅಥವಾ ನಮ್ಮ ಸರ್ಕಾರವಿದ್ದಾಗ ರಚನೆಯಾಗಿದ್ದ ಮಾಧುಸ್ವಾಮಿ ವರದಿಯಾದರೂ ಜಾರಿ ಮಾಡಲಿ ಉಳಿದ ಯಾವುದೇ ವರದಿಗಳಿಗೆ ನಾವು ಒಪ್ಪುವುದಿಲ್ಲವೆಂದು ಕಾರಜೋಳ ಸ್ಪಷ್ಟಪಡಿಸಿದರು.

ಮಾಜಿ ಕೇಂದ್ರ ಸಚಿವ ಎ.ನಾರಾಯಣಸ್ವಾಮಿ ಈ ಸಂದರ್ಭದಲ್ಲಿ ಮಾತನಾಡಿ, ಈ ಸರ್ಕಾರಕ್ಕೆ ದಲಿತರ ಬಗ್ಗೆ ಎಳ್ಳಷ್ಟು ಕಾಳಜಿ ಇಲ್ಲ. ದಲಿತರ ಮತ ಬೇಕು ಆದರೆ ಅವರ ಬಗ್ಗೆ ಏಳಿಗೆ ಬೇಕಿಲ್ಲ. ದಲಿತ ಸಿಎಂ ಮಾಡುವ ಪ್ರಸಂಗ ಬಂದಾಗ ಪರಸ್ಪರ ಕಚ್ಚಾಟ ಮಾಡಿ ಜನರಿಗೆ ಮಳ್ಳು ಮಾಡುವ ಗೋಜಿಗೆ ಹೋಗುವ ಈ ಸರ್ಕಾರಕ್ಕೆ ಮುಂಬರುವ 2028ರ ಸಾರ್ವತ್ರಿಕ ವಿಧಾನ ಸಭೆ ಚುನಾವಣೆಯಲ್ಲಿ ಜನ ತಕ್ಕ ಪಠ ಕಲಿಸಬೇಕಿದೆ ಎಂದರು.

ಮಾದಿಗ ದಂಡೋರ ಮಾದಿಗ ಮೀಸಲಾತಿ ಹೋರಾಟ ಸಮಿತಿ ರಾಜ್ಯ ಕಾರ್ಯಾಧ್ಯಕ್ಷ ಫರ್ನಾಂಡಿಸ್ ಹಿಪ್ಪಳಗಾಂವ, ಜಿಲ್ಲಾಧ್ಯಕ್ಷ ವಿಜಯಕುಮಾರ ಹಿಪ್ಪಳಗಾಂವ, ಜಿಲ್ಲಾ ಉಪಾಧ್ಯಕ್ಷ ಕಮಲಾಕರ ಹೆಗಡೆ, ಸಮಿತಿ ಇತರೆ ಪದಾಧಿಕಾರಿಗಳಾದ ಶಿವಣ್ಣ ಹಿಪ್ಪಳಗಾಂವ, ಹರೀಶ ಗಾಯಕವಾಡ, ದೇವದಾಸ ಹಿಪ್ಪಳಗಾಂವ, ಸನ್ನಿ ವಕೀಲಸಾಬ್ ಸೇರಿದಂತೆ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ಪಡಿತರ ಚೀಟಿ–ವಿಶೇಷ ಸಭೆ



**ಗದಗ, ಡಿ22–** ಬಿಪಿಎಲ್ ದಿಂದ ಎಪಿಎಲ್ ಆಗಿರುವ ಪಡಿತರ ಚೀಟಿಗಳನ್ನು ಬಿಪಿಎಲ್‌ಗೆ ಬದಲಾಯಿಸುವ ಕಾರ್ಯಕ್ಕೆ ಮುಂದಾಗಬೇಕು. ಅರ್ಹ ಫಲಾನುಭವಿಗಳು ಅನ್ನಭಾಗ್ಯ ಯೋಜನೆಯ ಸೌಲಭ್ಯ ಪಡೆದುಕೊಳ್ಳುವಂತಾಗಬೇಕು ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಟಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಅವರು ತಿಳಿಸಿದರು.

ನಗರದ ಉಪವಿಭಾಗಾಧಿಕಾರಿಗಳ ಕಾರ್ಯಾಲಯದ ಪಂಚ ಗ್ಯಾರಂಟಿ ಕಚೇರಿಯಲ್ಲಿ ಶನಿವಾರ ಗದಗ ತಾಲೂಕಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಪಡಿತರ ಚೀಟಿ (ರೇಷನ್ ಕಾರ್ಡ) ವಿಶೇಷ ಸಭೆಯನ್ನು ಜರುಗಿಸಿ ಮಾತನಾಡಿದರು.


ಅನ್ನ ಭಾಗ್ಯ ಯೋಜನೆಯು ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಯೋಜನೆಯಾಗಿದ್ದು ಸಮಾಜದ ಕಟ್ಟಕಡೆಯ ಕುಟುಂಬದ ಹಸಿವು ನೀಗಿಸಲು ಅನ್ನಭಾಗ್ಯ ಯೋಜನೆ ಸಹಕಾರಿಯಾಗಿದೆ. ಈ ಸೌಲಭ್ಯ ಅರ್ಹ ಫಲಾನುಭವಿಗಳಿಗೆ ನಿಗದಿತ ಸಮಯದಲ್ಲಿಯೇ ತಲುಪುವಂತಾಗಲು ಸಂಬಂಧಿತ ಅಧಿಕಾರಿಗಳು ಇಚ್ಚಾಶಕ್ತಿಯಿಂದ ಕೆಲಸ ನಿರ್ವಹಿಸಬೇಕು ಎಂದರು.

ಗದಗ ತಾಲೂಕು ಪಂಚ ಗ್ಯಾರಂಟಿ ಸಮಿತಿ ನಿರ್ದೇಶನದ ಮೇರೆಗೆ ಬಿಪಿಎಲ್ ಪಡಿತರ ಚೀಟಿಯಿಂದ ವಂಚಿತರಾದವರನ್ನು ಗುರುತಿಸಿ ಪಟ್ಟಿ ಮಾಡಬೇಕು. ಎಎವೈ ( ಅಂತ್ಯೋದಯ ಅನ್ನ ಯೋಜನಾ)/ ಬಿಪಿಎಲ್ ದಿಂದ ಎಪಿಎಲ್‌ಗೆ ಬದಲಾವಣೆಯಾಗಿರುವ ಪಡಿತರ ಚೀಟಿಗಳನ್ನು ಎಎವೈ/ ಬಿಪಿಎಲ್‌ಗೆ ಬದಲಾಯಿಸಬೇಕಾದರೆ ಹೊಸದಾಗಿ ಅರ್ಜಿ ಸಲ್ಲಿಸಬೇಕು ಹಾಗೂ ಸಲ್ಲಿಸಬೇಕಾದ ದಾಖಲೆ ಹಾಗೂ ಹೆಚ್ಚಿನ ವಿವರಗಳಿಗಾಗಿ ಗ್ರಾಮೀಣ ಭಾಗದಲ್ಲಿ ಪಡಿತರ ಚೀಟಿಗಳ ಮಾಹಿತಿಗಾಗಿ ತಹಶೀಲ್ದಾರ ಕಚೇರಿಯಲ್ಲಿ ಇರುವ ಆಹಾರ ವಿಭಾಗಕ್ಕೆ ಹಾಗೂ ಗದಗ ಬೆಟಗೇರಿ ಶಹರದಲ್ಲಿ ಬರುವ ಪಡಿತರ ಚೀಟಿಗಳ ಮಾಹಿತಿಗಾಗಿ ಗದಗ ಬೆಟಗೇರಿ ನಗರದ ನಗರಾಭಿವೃದ್ಧಿ ಕಾರ್ಯಾಲಯದ ಹತ್ತಿರವಿರುವ ಸಹಾಯಕ ನಿರ್ದೇಶಕ ಕಾರ್ಯಾಲಯ ಸಂಪರ್ಕಿಸಬಹುದಾಗಿದೆ. ರಾಜ್ಯ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಯ ಸೌಲಭ್ಯ ಎಲ್ಲ ಅರ್ಹ ಫಲಾನುಭವಿಗಳಿಗೆ ತಲುಪಬೇಕು. ಆದಷ್ಟು ಶೀಘ್ರ ಬಿಪಿಎಲ್ ಪಡಿತರದಾರರಿಗೆ ಎದುರಾಗುವ ಸಮಸ್ಯೆಗಳನ್ನು ಇತ್ಯರ್ಥಗೊಳಿಸಬೇಕು ಎಂದು ಅಶೋಕ ಮಂದಾಲಿ ತಿಳಿಸಿದರು.

ಆಹಾರ ಇಲಾಖೆಯ ಅಧಿಕಾರಿಗಳು ಮಾತನಾಡಿ ಎನ್.ಎಫ್.ಎಸ್.ಎ (ರಾಷ್ಟ್ರೀಯ ಆಹಾರ ಭದ್ರತಾ ಕಾಯಿದೆ )ದಡಿ ಗದಗ ತಾಲೂಕಿನಲ್ಲಿ 1–6–2025 ರವರೆಗೆ (ಎಎವೈ, ಪಿಎಚ್‌ಎಚ್) 2,76,147 ಪಡಿತರ ಚೀಟಿದಾರರಿದ್ದಾರೆ. 1–6–2025 ರಲ್ಲಿ 7441 ಅರ್ಜಿಗಳು ಸ್ವೀಕೃತವಾಗಿದ್ದು ಆ ಪೈಕಿ ,3,787 ಅರ್ಜಿಗಳು ಮಂಜೂರಾಗಿವೆ. 695 ಅರ್ಜಿಗಳು ತಿರಸ್ಕೃತಗೊಂಡಿವೆ. 2,959 ಅರ್ಜಿಗಳು ಬಾಕಿ ಉಳಿದಿವೆ. ಹೊಸದಾಗಿ ಪಡಿತರ ಚೀಟಿ ಹೊಂದಿದೆ. ಜಿಲ್ಲೆಯಲ್ಲಿ 22,284 ಅರ್ಜಿಗಳು ಸ್ವೀಕೃತವಾಗಿದ್ದು ಆ ಪೈಕಿ 12,373 ಅರ್ಜಿಗಳು ಮಂಜೂರಾಗಿವೆ. 3,311 ಅರ್ಜಿಗಳು ತಿರಸ್ಕೃತಗೊಂಡಿದ್ದು , 6,600 ಅರ್ಜಿಗಳು ಬಾಕಿ ಉಳಿದಿವೆ ಎಂದು ಸಭೆಗೆ ವಿವರಿಸಿದರು.

ಈ ಸಂದರ್ಭದಲ್ಲಿ ಸಮಿತಿಯ ಸದಸ್ಯರಾದ ಸಾವಿತ್ರಿ ಹೂಗಾರ, ಮಲ್ಲು ಬಾರ್ಕೇಕರ, ಸಂಗಮೇಶ ಕರಕಲಮಟ್ಟಿ, ನಗರಾಭಿವೃದ್ಧಿ ಪ್ರಾಧಿಕಾರದ ಸದಸ್ಯರಾದ ಬಸವರಾಜ ಕಡೆಮನಿ, ಆಹಾರ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಏಷ್ಯಾದ ಅತಿದೊಡ್ಡ ಕಡಲಾಚೆಯ ಚಿನ್ನದ ನಿಕ್ಷೇಪ ಪತ್ತೆ



**ಬಿಚೀಂಗ್,ಡಿ.22:–** ಚೀನಾ ಇತ್ತೀಚೆಗೆ ಏಷ್ಯಾದ ಇತಿಹಾಸದಲ್ಲಿಯೇ ಅತಿದೊಡ್ಡ ಕಡಲಾಚೆಯ ಚಿನ್ನದ ನಿಕ್ಷೇಪವನ್ನು ಕಂಡುಹಿಡಿದಿದೆ, ಇದು ಶಾಂಡೊಂಗ್ ಪ್ರಾಂತ್ಯದ ಯಾಂಟೈ ನಗರದ ಬಳಿಯ ಲುಝೌ ಕರಾವಳಿಯಲ್ಲಿದೆ. ಶ್ರೀಮಂತ ಚಿನ್ನದ ಸಂಪನ್ಮೂಲಗಳಿಗೆ ಹೆಸರುವಾಸಿಯಾದ ಜಿಯಾಡಾಂಗ್ ಪರ್ಯಾಯ ದ್ವೀಪದ ಬಳಿ ಈ ನಿಕ್ಷೇಪ ಕಂಡುಬಂದಿದೆ.

ಈ ಆವಿಷ್ಕಾರವು ಚೀನಾದ ಗಣಿಗಾರಿಕೆ ಭೂದೃಶ್ಯದಲ್ಲಿ ಹೊಸ ಯುಗಕ್ಕೆ ನಾಂದಿ ಹಾಡಿದೆ ಮತ್ತು ದೇಶದ ಆರ್ಥಿಕ ಮತ್ತು ವ್ಯಾಪಾರ ತಂತ್ರಗಳ ಮೇಲೆ ದೀರ್ಘ ನೆರಳು ಬೀಳಬಹುದು ಎಂದು ತಜ್ಞರು ಹೇಳಿದ್ದಾರೆ. ಸರ್ಕಾರಿ ಅಧಿಕಾರಿಗಳ ಪ್ರಕಾರ, ಈ ಹೊಸ ಆವಿಷ್ಕಾರವು ಲೌಝೌನ ಒಟ್ಟು ಸಾಬೀತಾಗಿರುವ ಚಿನ್ನದ ನಿಕ್ಷೇಪವನ್ನು ಸುಮಾರು 3,900 ಟನ್‌ಗಳಿಗೆ ಹೆಚ್ಚಿಸಿದೆ, ಇದು ಚೀನಾದ ರಾಷ್ಟ್ರೀಯ ನಿಕ್ಷೇಪಗಳ ಸರಿಸುಮಾರು 26 ಪ್ರತಿಶತವನ್ನು ಪ್ರತಿನಿಧಿಸುತ್ತದೆ. ಆದರೆ ಅಧಿಕಾರಿಗಳು ಒಟ್ಟಾರೆ ಪ್ರಾದೇಶಿಕ ನಿಕ್ಷೇಪಗಳ ಮಾಹಿತಿಯನ್ನು ಮಾತ್ರ ಹಂಚಿಕೊಂಡಿದ್ದಾರೆ.ಕಡಲಾಚೆಯ ಭಾಗದ ನಿಖರವಾದ ಪ್ರಮಾಣವನ್ನು ಇನ್ನೂ ಸಾರ್ವಜನಿಕಗೊಳಿಸಲಾಗಿಲ್ಲ. ಈ ಆವಿಷ್ಕಾರವು ಸ್ಥಳೀಯ ಗಣಿಗಾರಿಕೆ ಚಟುವಟಿಕೆಗಳಿಗೆ ಮಾತ್ರವಲ್ಲದೆ, ರಾಷ್ಟ್ರೀಯ ಚಿನ್ನದ ಲಭ್ಯತೆ ಮತ್ತು ನಿಕ್ಷೇಪಗಳ ಅಂಕಿಅಂಶಗಳ ಮೇಲೂ ಪರಿಣಾಮ ಬೀರಬಹುದು ಎಂಬುದನ್ನು ಇದು ಸ್ಪಷ್ಟಪಡಿಸುತ್ತದೆ.

ಈ ಕಡಲಾಚೆಯ ಚಿನ್ನದ ನಿಕ್ಷೇಪವು ಚೀನಾದ ಗಣಿಗಾರಿಕೆ ನೀತಿಗಳನ್ನು ಮತ್ತು ಅಂತರರಾಷ್ಟ್ರೀಯ ಮಾರುಕಟ್ಟೆಯಲ್ಲಿ ದೇಶದ ಸ್ಥಾನವನ್ನು ಮತ್ತಷ್ಟು ಬಲಪಡಿಸಬಹುದು ಎಂದು ತಜ್ಞರು ನಂಬುತ್ತಾರೆ. ಇಲ್ಲಿಯವರೆಗೆ ತುಲನಾತ್ಮಕವಾಗಿ ಸೀಮಿತವಾಗಿದ್ದ ಕಡಲಾಚೆಯ ಗಣಿಗಾರಿಕೆಗೆ ಈಗ ಗಮನಾರ್ಹ ಹೂಡಿಕೆ ಮತ್ತು ತಾಂತ್ರಿಕ ನಾವೀನ್ಯತೆ ಅಗತ್ಯವಿರುತ್ತದೆ. ಪರಿಣಾಮವಾಗಿ, ಇದು ಜಾಗತಿಕ ಚಿನ್ನದ ಪೂರೈಕೆ ಸರಪಳಿ, ಬೆಲೆ ಸ್ಥಿರತೆ ಮತ್ತು ವ್ಯಾಪಾರ ತಂತ್ರಗಳ ಮೇಲೆ ಪರಿಣಾಮ ಬೀರಬಹುದು. ದೇಶದ ಆರ್ಥಿಕ ಭದ್ರತೆ ಮತ್ತು ಕಾರ್ಯತಂತ್ರದ ಖನಿಜ ಸಂಪನ್ಮೂಲಗಳ ರಕ್ಷಣೆಗೆ ಈ ಆವಿಷ್ಕಾರ ಮಹತ್ವದ್ದಾಗಿದೆ ಎಂದು ಚೀನಾ ಸರ್ಕಾರ ಬಣ್ಣಿಸಿದೆ. ಭವಿಷ್ಯದಲ್ಲಿ, ಈ ಪ್ರದೇಶದಲ್ಲಿ ವಿವರವಾದ ಸಮೀಕ್ಷೆಗಳು ಮತ್ತು ಸುಸ್ಥಿರ ಗಣಿಗಾರಿಕೆ ಯೋಜನೆಗಳನ್ನು ಜಾರಿಗೆ ತರಲಾಗುವುದು ಎಂದು ಅಧಿಕಾರಿಗಳು ಹೇಳಿದ್ದಾರೆ. ಇದು ಆರ್ಥಿಕ ಪ್ರಯೋಜನಗಳನ್ನು ತರುವುದಲ್ಲದೆ, ತಾಂತ್ರಿಕ ನಾವೀನ್ಯತೆ ಮತ್ತು ಉದ್ಯೋಗಾವಕಾಶಗಳನ್ನು ಉತ್ತೇಜಿಸುತ್ತದೆ.

# ನಾಗೋರಾದಲ್ಲಿ ಭಾಗ್ಯವಂತಿ ದೇವಿ ಜಾತ್ರೆ, ಪಲ್ಲಕ್ಕಿ ಉತ್ಸವ ಮುಕ್ತಾಯ

**ಬೀದರ :ಡಿ.22–**ತಾಲೂಕಿನ ನಾಗೋರಾ ಗ್ರಾಮದಲ್ಲಿನ ಭಾಗ್ಯವಂತಿ ದೇವಿ ಹಾಗೂ ಭವಾನಿ ತಾಯಿಯ 17ನೇ ಜತ್ರಾ ಮಹೋತ್ಸವ ಈಚೆಗೆ ಅದ್ದೂರಿಯಾಗಿ ಜರುಗಿತು. ಡಿ.20 ರಂದು ಶನಿವಾರ ಜಾತ್ರೆಯ ನಿಮಿತ್ತ ದೇವಿಯ ಪಲ್ಲಕ್ಕಿ ಮೆರವಣಿಗೆಯು ಗ್ರಾಮದ ತುಂಬೆಲ್ಲ ನಡೆಯಿತು. ಹಳೆಯ ನಾಗೋರಾಗೆ ತೆರಳಿದ ಪಲ್ಲಕ್ಕಿ ಉತ್ಸವವವು ಮಂದಿರಕ್ಕೆ ಆಗಮಿಸಿತು. ಈ ವೇಲೆ ಗ್ರಾಮಸ್ಥರು ದೇವಿಗೆ ಪೂಜೆ ಸಲ್ಲಿಸಿದರು. ಕಾಯಿ ಕರ್ಪೂರ ಅರ್ಪಿಸಿ ನಮಿಸಿ ಸ್ವಾಗತಿಸಿದರು. ಪಲ್ಲಕ್ಕಿಯು ನಂತರ ಮಹಾಪ್ರಸಾದ ವಿತರಣೆ ನಡೆಯಿತು. ಬೀದರ ತೆಲಂಗಾಣ ಮಹಾರಾಷ್ಟ್ರ ಆಂದ್ರ ಪ್ರದೇಶ ಸರಿದಂತೆ ನಾನಾ ಕಡೆಯಿಂದ ಬಂದಿದ್ದ ಬಕ್ತರು ಹುಗ್ಗಿ ಅನ್ನ ಸಾರು ಸವಿದರು. ದೇವಿಯ ದರುಶನ ಪಡೆದುಕೊಂಡು ಪುನೀತರಾದರು. ಜತೆಗೆ ಜಾತ್ರೆಯ ನಿಮಿತ್ತ ದೇವಿಗೆ ವಿಶೇಷ ಪೂಜೆ ಹವನ ಭಜನೆ ಕೀರ್ತನೆ ಸೇರಿದಂತೆ ಹಲವು ಧಾರ್ಮಿಕ ಕಾರ್ಯಕ್ರಮಗಳು ನಡೆದವು. ದೇವಿಯ ಆರಾಧಕರಾದ ಸಂತ ಮೀರಾಬಾಯಿ ಅವರ ನೇತೃತ್ವದಲ್ಲಿ ಜಾತ್ರೆ ನಡೆಯಿತು. ದೇವಿಯ ಭಕ್ತರು ಸುರೇಶ



ಸಿಂದೆ. ಮನ್ನಳ್ಳಿ ಪೊಲಿಸ ಠಾಣೆ ಪಿಎಸ್ ಐ ಶ್ರೀಮತಿ ನಂದಿನಿ. ನಾಗೋರಾದ ಮುಖಂಡರಾದ ರಾಜರೆಡ್ಡಿ. ಭಕ್ತರಾದ ಶಿವರಾಜ ಜಮಾದಾರ ಖಾಜಾಪುರ. ಸಂತೋಷ ಬಿರಾದಾರ. ಅರ್ಚಕರಾದ ಬಾಬುರಾವ. ಅನಿಲ. ಸುನಿಲ. ಗ್ರಾಮ ಪಂಚಾಯತ ಸದಸ್ಯರು ಹಾಗೂ ಗ್ರಾಮಸ್ಥರು ಇದ್ದರು. ಮನ್ನಳ್ಳಿ ಪೊಲಿಸ ಠಾಣೆಯಿಂದ ಜಾತ್ರೆಯ ನಿಮಿತ್ತ ಪೊಲಿಸ ಬಂದೋ ಬಸ್ತ ಮಾಡಲಾಗಿತ್ತು.

ಯುವ ಮಾರ್ಗ

www.yuvamarga.com Yuva Marga yuva_marga_

# ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆ

ಯುವಮಾರ್ಗ ಸುದ್ದಿ

**ರಾಯಚೂರು,ಡಿ.22**ಕಲಬುರಗಿ ವಿಭಾಗದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್.ಆರ್.ಮೆಹರೋಜ್ ಖಾನ್ ಅವರು ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಪ್ರಗತಿ ಪರಿಶೀಲನಾ ಸಭೆಯು ನಗರದ ಜಿಲ್ಲಾ ಪಂಚಾಯತಿಯ ಜಲ ನಿರ್ಮಲ ಸಭಾಂಗಣದಲ್ಲಿ ಡಿ.22ರಂದು ನಡೆಯಿತು.

ಇದೆ ವೇಳೆ ಮಾತನಾಡಿದ ಎಸ್.ಆರ್.ಮೆಹರೋಜ್ ಖಾನ್ ಅವರು, ಗೃಹಲಕ್ಷ್ಮಿ ಯೋಜನೆಯ ಫಲಾನುಭಗಳಿಗೆ ಸಕಾಲಕ್ಕೆ ಸಹಾಯಧನ ಸಿಗಬೇಕು ಎನ್ನುವ ಸಲಹೆ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಗಮನ ಹರಿಸಬೇಕು. ತಾಂತ್ರಿಕ ತೊಂದರೆಗಳನ್ನು ಬೇಗನೆ ಸರಿಪಡಿಸಬೇಕು ಎಂದು ಸೂಚನೆ ನೀಡಿದರು.

ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ ಹಾಗೂ ಯುವನಿಧಿ ಯೋಜನೆಗಳ ಪ್ರಗತಿಯ ಬಗ್ಗೆ ಇದೆ ವೇಳೆ ಎಸ್.ಆರ್. ಮೆಹರೋಜ್ ಖಾನ್ ಅವರು ಪರಿಶೀಲಿಸಿದರು. ಆಯಾ ಇಲಾಖೆಗಳ ಅಧಿಕಾರಿಗಳು ಸಭೆಗೆ ಅಂಕಿ-ಅಂಶಗಳ ಮಾಹಿತಿ ನೀಡಿದರು.

ಜಿಲ್ಲೆಯಲ್ಲಿ ಸಾರ್ವಜನಿಕ ವಿತರಣಾ ಪದ್ಧತಿಯಡಿ 737 ನ್ಯಾಯಬೆಲೆ ಅಂಗಡಿಗಳು ಪಗತಿಯಲ್ಲಿವೆ. ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ರಾಯಚೂರು ಜಿಲ್ಲೆಯ ಕೇಂದ್ರ ವ್ಯಾಪ್ತಿಯ ಪ್ರತಿ ಅಂತ್ಯೋದಯ(ಎಎವೈ) ಪಡಿತರ ಚೀಟಿಗೆ 21 ಕೆ.ಜಿ ಜೋಳ ಮತ್ತು 14 ಕೆ.ಜಿ ಸಾರವರ್ಧಿತ ಅಕ್ಕಿ ಹಾಗೂ ಕೇಂದ್ರ ವ್ಯಾಪ್ತಿಯ ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯಲ್ಲಿನ ಪ್ರತಿ ಫಲಾನುಭವಿಗೆ 03 ಕೆ.ಜಿ ಜೋಳ ಮತ್ತು 02 ಕೆ.ಜಿ ಸಾರವರ್ಧಿತ ಅಕ್ಕಿ ಜೊತೆಗೆ ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆಯಡಿ ಮಾರ್ಗಸೂಚಿಯಂತೆ ಏಕ ಸದಸ್ಯ, ದ್ವಿ ಸದಸ್ಯ ಮತ್ತು ತ್ರಿ ಸದಸ್ಯ ಎಎವೈ ಪಡಿತರ ಚೀಟಿಗಳನ್ನು ಹೊರತುಪಡಿಸಿ ನಾಲ್ಕು ಮತ್ತು ನಾಲ್ಕಕಿಂತ ಹೆಚ್ಚಿನ ಸದಸ್ಯರುಳ್ಳ ಕೇಂದ್ರ ಮತ್ತು ರಾಜ್ಯ ವ್ಯಾಪ್ತಿಯ ಅಂತ್ಯೋದಯ(ಎಎವೈ) ಮತ್ತು ಪಿ.ಹೆಚ್.ಹೆಚ್ (ಬಿಪಿಎಲ್) ಪಡಿತರ ಚೀಟಿಯ ಪ್ರತಿ ಫಲಾನುಭವಿಗೆ ಹೆಚ್ಚುವರಿಯಾಗಿ 05 ಕೆ.ಜಿ ಅಕ್ಕಿಯನ್ನು ಉಚಿತವಾಗಿ ವಿತರಿಸಲಾಗುತ್ತಿದೆ ಎಂದು ಆಹಾರ ಇಲಾಖೆಯ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಶಾಲಾ-ಕಾಲೇಜುಗಳ ವಿದ್ಯಾರ್ಥಿಗಳಿಗೆ ಅನುಕೂಲವಾಗಲು, ಸಾರ್ವಜನಿಕರ ಬೇಡಿಕೆಗೆ ಅನುಗುಣವಾಗಿ ಮಾರ್ಗಗಳನ್ನು ಹೊಂದಾಣಿಕೆ ಮಾಡುವ ಪ್ರಯತ್ನ ನಡೆಯುತ್ತಿದೆ. ಆದಾಗ್ಯೂ ಜಿಲ್ಲೆಯಲ್ಲಿ ಹೆಚ್ಚಿನ ಸೇವೆ ನೀಡಲು ಸಾರಿಗೆ ಬಸ್‌ಗಳ ಅವಶ್ಯಕತೆಯಿದೆ ಎಂದು ಶಕ್ತಿ ಯೋಜನೆಯ ಅನುಷ್ಠಾನಾಧಿಕಾರಿಗಳಾದ ಕಲ್ಯಾಣ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ



ವಿಭಾಗೀಯ ನಿಯಂತ್ರಾಣಧಿಕಾರಿಗಳು ಸಭೆಗೆ ಕೋರಿದರು.

ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,52,582 ಗ್ರಾಹಕರ ಮನೆಗಳಿಗೆ ಉಚಿತ ವಿದ್ಯುತ್ ಸೌಲಭ್ಯ ಒದಗಿಸಲಾಗಿದೆ ಎಂದು ಜೆಸ್ಕಾಂ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ರಾಯಚೂರು ಜಿಲ್ಲೆಯಲ್ಲಿ 1,58,435 ನಿರುದ್ಯೋಗಿ ಯುವಕರು ಯುವನಿಧಿ ಯೋಜನೆಯ ಲಾಭ ಪಡೆದುಕೊಳ್ಳುತ್ತಿದ್ದಾರೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಜಿಲ್ಲಾ ಸಮಿತಿಯ ಉಪಾಧ್ಯಕ್ಷರಾದ ನಾಗೇಂದ್ರಪ್ಪ ಮತಮಾರಿ, ಗಫೂರ್ ಖಾನ್, ಹನುಮಂತಪ್ಪ ಜಾಲಿಬೆಂಚಿ, ಶೇಖರಗೌಡ ತುರುವಿಹಾಳ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ, ಜಿಲ್ಲಾ ಪಂಚಾಯತ ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಸಿಡಾಕ್ ಜಂಟಿ ನಿರ್ದೇಶಕರಾದ ಜಿ.ಯು.ಹುಡೇದ್, ವಿವಿಧ ಗ್ಯಾರಂಟಿ ಯೋಜನೆಗಳ ಅನುಷ್ಠಾನಾಧಿಕಾರಿಗಳಾದ ನವೀನ್‌ಕುಮಾರ್, ಎಂ.ಎಸ್.ಚಂದ್ರಶೇಖರ, ನಜೀರ್ ಅಹ್ಮದ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು

# ನಕ್ಕುಂದಿ ಗ್ರಾಮದಲ್ಲಿ ಸಂಭ್ರಮದ ಆಂಜಿನೇಯ್ಯ ಉಚ್ಚಾಯ ಮಹೋತ್ಸವ

ಯುವಮಾರ್ಗ ಸುದ್ದಿ



**ಮಾನ್ವಿ,ಡಿ.22–** ತಾಲೂಕಿನ ನಕ್ಕುಂದಿ ಗ್ರಾಮದಲ್ಲಿ ಆರಾಧ್ಯ ದೈವ ಶ್ರೀ ಆಂಜಿನೇಯ್ಯ ಸ್ವಾಮಿಯ ನೂತನವಾಗಿ ಕಬ್ಬಿಣದಲ್ಲಿ ನಿರ್ಮಿಸಿದ ಉಚ್ಚಾಂಯ ಮಹೋತ್ಸವವು ಶನಿವಾರದಂದು ಹೂವಿನ ಅಲಂಕಾರ, ವಿವಿಧ ಚಿತ್ರಗಳ ಕಲೆಗಳು, ಕೇಸರಿ ಧ್ವಜಗಳಿಂದ ಅಲಂ ಕರಿಸಿ ಅತ್ಯಂತಸಂಭ್ರಮ ಸಡಗರದಿಂದ ನಡೆಯಿತು. ನೂರಾರು ಭಕ್ತರು ಹಾಗೂ ಗ್ರಾಮಸ್ಥರ ಸಾನ್ನಿಧ್ಯದಲ್ಲಿಭಕ್ತಿ, ಸಂಭ್ರಮ ಮತ್ತು ಶಿಸ್ತುಪೂರ್ಣ ವಾತಾವರಣದಲ್ಲಿ ಅತ್ಯಂತ ವೈಭವದಿಂದ ಹುಚ್ಚಯ್ಯ ಮಹೋತ್ಸವವನ್ನು ನಡೆಯಿತು. ಅಂದು ಬೆಳಗ್ಗೆ ರುದ್ರಾಭಿಷೇಕ ಸೇರಿದಂತೆ ಧಾರ್ಮಿಕ ವಿಧಿವಿಧಾನಗಳು, ಪೂಜೆ ಪುನಸ್ಕಾರಗಳು ಮಹೋತ್ಸವಕ್ಕೆ ವಿಶೇಷ ಮೆರುಗು ನೀಡಿದವು. ಪ್ರತಿ ವರ್ಷ ಎಳ್ಳ ಅಮವಾಸ್ಯೆ ದಿನದಂದು ಜರುಗುವ ಈ ಉಚ್ಚಾಯ ಮಹೋತ್ಸವಕ್ಕೆ ಭಕ್ತರ ವಿವಿಧ ಹರಕೆ, ಭಕ್ತಿ ಸೇವೆಗಳನ್ನು ಸಲ್ಲಿಸಿದರು.

# ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ ಮಾನ್ವಿ ತಾಲೂಕ ಘಟಕಕ್ಕೆ ದೇವೇಂದ್ರ ನಾಯಕ ಆಯ್ಕೆ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.22–** ಪಟ್ಟಣದ ಪ್ರವಾಸಿ ಮಂದಿರದಲ್ಲಿ ನಡೆದ ಕಾರ್ಯಕ್ರಮದಲ್ಲಿ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ (ರಿ) ರಾಯಚೂರು ಜಿಲ್ಲಾ ಅಧ್ಯಕ್ಷರಾದ ಬಿ. ರಾಮಣ್ಣ ನಾಯಕ ಅವರ ಆದೇಶದ ಮೇರೆಗೆ ಕರ್ನಾಟಕ ವಾಲ್ಮೀಕಿ ನಾಯಕ ಮಹಾಸಭಾ (ರಿ) ಮಾನ್ವಿ ತಾಲೂಕ ಘಟಕದ ಅಧ್ಯಕ್ಷರಾಗಿ ದೇವೇಂದ್ರ ನಾಯಕ ಮಾನ್ವಿ ಅವರನ್ನು ನೇಮಕ ಮಾಡಲಾಗಿದೆ.

ನೂತನ ತಾಲೂಕಾಧ್ಯಕ್ಷರಿಗೆ ಸಂಘದ ಎಲ್ಲಾ ತತ್ವ-ಸಿದ್ಧಾಂತಗಳಿಗೆ ಬದ್ಧರಾಗಿ ಶೈಕ್ಷಣಿಕ, ಆರ್ಥಿಕ ಹಾಗೂ ಸಂಘಟನೆಯ ಬಲವರ್ಧನೆಗಾಗಿ ಶ್ರಮಿಸುವಂತೆ ಸೂಚಿಸಿ ಅಧಿಕೃತ ಆದೇಶ ನೀಡಲಾಯಿತು. ನಂತರ ತಾಲೂಕಾಧ್ಯಕ್ಷರಾಗಿ ಆಯ್ಕೆಯಾದ ದೇವೇಂದ್ರ ನಾಯಕ ಅವರಿಗೆ ಅವರ ಅಭಿಮಾನಿ ಬಳಗ ಸನ್ಮಾನಿಸಿ ಗೌರವ ಸಲ್ಲಿಸಿತು.

ಈ ಸಂದರ್ಭದಲ್ಲಿ ನಾಯ್ಡು ನಾಯಕ, ಹನುಮೇಶ್ ನಾಯಕ, ಕೊಂಡಯ್ಯ ನಾಯಕ, ಯಲ್ಲಯ್ಯ ನಾಯಕ, ದೇವರಾಜ್ ನಾಯಕ, ರಮೇಶ್ ನಾಯಕ, ಉಪೇಂದ್ರ ನಾಯಕ, ತಾಯಣ್ಣ ನಾಯಕ, ನರಸಿಂಹ ನಾಯಕ, ಯಲ್ಲಪ್ಪ ನಾಯಕ, ರೇಣುಕಾ ರಾಜಾ ನಾಯಕ, ಜಗದೀಶ್ ನಾಯಕ, ವಿರೇಶ್ ನಾಯಕ, ಮಂಜು ನಾಯಕ, ಈರಯ್ಯ ನಾಯಕ, ವೆಂಕಟೇಶ್ ನಾಯಕ, ವಿಶ್ವನಾಥ ನಾಯಕ, ರಾಜು ನಾಯಕ, ಮಹೇಶ್ ನಾಯಕ, ಶ್ರೀನಿವಾಸ್ ನಾಯಕ, ಚಂದ್ರು ನಾಯಕ, ಪ್ರಜ್ವಲ್ ನಾಯಕ, ಪರಶುರಾಮ್ ನಾಯಕ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಸೋಂಕು ಮರಳದಿರಲು ಲಸಿಕೆ ಹಾಕಿಸಿ

***ಆಲ್ಕೋಡ ಗ್ರಾಪಂ ಅಧ್ಯಕ್ಷ ಮಹೇಶ ನಾಯಕ ಸಲಹೆ. *ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ.**



**ಅರಕೇರಾ,ಡಿ.22:**ದೇಶವನ್ನು ಪೋಲಿಂಯೋ ರೋಗದಿಂದ ಸಂಪೂರ್ಣ ಮುಕ್ತವಾಗಿರಿಸಲು ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಪಲ್ಸ್ ಪೋಲಿಯೋ ಅಭಿಯಾನವನ್ನು ಜಾರಿಗೆ ತಂದಿದೆ ಎಂದು ಗ್ರಾಪಂ ಅಧ್ಯಕ್ಷ ಮಹೇಶ ನಾಯಕ ಹೇಳಿದರು.

ತಾಲೂಕಿನ ಆಲ್ಕೋಡ ಗ್ರಾಪಂ ಆವರಣದಲ್ಲಿ ಜಿಪಂ, ಆರೋಗ್ಯ ಇಲಾಖೆ, ಶಿಶು ಅಭಿವೃದ್ಧಿ ಯೋಜನೆ ವತಿಯಿಂದ ಹಮ್ಮಿಕೊಂಡಿದ್ದ ಪಲ್ಸ್ ಪೋಲೀಯೋ ಅಭಿಯಾನಕ್ಕೆ ಭಾನುವಾರ ಚಾಲನೆ ನೀಡಿ ಮಾತನಾಡಿದರು. ಪೋಲಿಯೋ ರೋಗ ದೇಶದಿಂದ ಸಂಪೂರ್ಣವಾಗಿ ನಿರ್ಮೂಲನೆ ಆಗಿದೆ. ಆದರೆ ವಿದೇಶಗಳಲ್ಲಿ ಈ ರೋಗ ಇನ್ನು ಸಕ್ರಿಯವಾಗಿರುವುದರಿಂದ ನಮ್ಮ ದೇಶದಲ್ಲಿ ಸೋಂಕು ಮರಳದಂತೆ ಎಚ್ಚರ ವಹಿಸಬೇಕು. ಆದ್ದರಿಂದ 0 ರಿಂದ 5 ವರ್ಷ ವಯಸ್ಸಿನ ಎಲ್ಲಾ ಮಕ್ಕಳಿಗೆ ಕಡ್ಡಾಯವಾಗಿ ಪಲ್ಸ್ ಪೋಲೀಯೊ ಲಸಿಕೆ ಹಾಕಿಸಬೇಕು. ಕೇವಲ ಎರಡು ಹನಿ ಲಸಿಕೆ ಸದೃಢ ಆರೋಗ್ಯಕ್ಕೆ ಸಹಕಾರಿಯಾಗುತ್ತದೆ ಎಂದರು.

ಗ್ರಾಪಂ ಸದಸ್ಯ ಅಮರೇಶ ಕುಂಬಾರ, ಎಎಮ್ ಹುಲಿಗೆಮ್ಮ, ಅಂಗನವಾಡಿ ಕಾರ್ಯಕರ್ತೆ ಶಕುಂತಲಾ, ರೇಣುಕಾ ಪ್ರಮುಖರಾದ ಭುವನೇಶ, ಅಮರೇಶ ಅಕ್ಕರಕಿ ಇತರರಿದ್ದರು

# ಪೋಲಿಯೋ ಮುಕ್ತ ಭಾರತ-ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ ನೀಡಿದ ಶಾಸಕ ಹಂಪಯ್ಯನಾಯಕ



ಯುವಮಾರ್ಗ ಸುದ್ದಿ

**ಮಾನ್ವಿ,ಡಿ.22–** ಪಟ್ಟಣದ ತಾಯಿ ಮತ್ತು ಮಕ್ಕಳ ಆಸ್ಪತ್ರೆ ಸಭಾಂಗಣದಲ್ಲಿ ಆರೋಗ್ಯ ಇಲಾಖೆ ವತಿಯಿಂದ ನಡೆದ ಪೋಲಿಯೋ ಮುಕ್ತ ಭಾರತ-ಪಲ್ಸ್ ಪೋಲಿಯೋ ಅಭಿಯಾನ ಅಂಗವಾಗಿ ಶಾಸಕ ಹಂಪಯ್ಯನಾಯಕ ಮಗುವಿಗೆ ಪೋಲಿಯೋ ಹನಿಗಳನ್ನು ಹಾಕುವ ಮೂಲಕ -ಪಲ್ಸ್ ಪೋಲಿಯೋ ಅಭಿಯಾನಕ್ಕೆ ಚಾಲನೆ ನೀಡಿ ಮಾತನಾಡಿ ತಾಲೂಕಿನಾದ್ಯಂತ ಆರೋಗ್ಯ ಇಲಾಖೆಯಿಂದ ಪಲ್ಸ್ ಪೋಲಿಯೋ ಲಸಿಕೆಯನ್ನು ನೀಡುವುದಕ್ಕೆ ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ ನಮ್ಮ ದೇಶದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಪ್ರತಿವರ್ಷ 0-5 ವರ್ಷದ ಮಕ್ಕಳಿಗೆ ಉಚಿತವಾಗಿ ಪೋಲಿಯೋ ಹನಿಗಳನ್ನು ನೀಡುವ ಮೂಲಕ ದೇಶವನ್ನು ಪೋಲಿಯೋ ಮುಕ್ತವಾಗಿಸಿದ್ದರೆ ಅದ್ದರು ಕೂಡ ಪೋಲಿಯೋ ದಿಂದ ಮಕ್ಕಳಿಗೆ ಅಂಗವೈಕಲ್ಯ ಉಂಟಾಗದಂತೆ ಮುಂಜಾಗ್ರತೆಯಾಗಿ ಪೋಲಿಯೋ ಲಸಿಕೆಯನ್ನು ಹಾಕಲಾಗುತ್ತಿದೆ ಮನೆಗೆ ಮನೆಗೆ ಭೇಟಿ ನೀಡಿ ಆರೋಗ್ಯ ಇಲಾಖೆ ಸಿಬ್ಬಂದಿಗಳು ಆಶಾ ಕಾರ್ಯಕರ್ತರು ಪೋಲಿಯೋ ಲಸಿಕೆ ಹಾಕುತ್ತಿದ್ದಾರೆ ಪಾಲಕರು ಅಗತ್ಯ ಸಹಕಾರ ನೀಡುವ ಮೂಲಕ ತಮ್ಮ ಮಕ್ಕಳಿಗೆ ಪೋಲಿಯೋ ಕಾಯಿಲೆ ಬರದಂತೆ ತಡೆಯಬೇಕು ಎಂದು ತಿಳಿಸಿದರು.

ತಾಲೂಕು ಆರೋಗ್ಯಧಿಕಾರಿ ಡಾ.ಶರಣಬಸವರಾಜ ಮಾತನಾಡಿ ತಾಲೂಕಿನಲ್ಲಿ 0-5 ವರ್ಷದ 47,920 ಮಕ್ಕಳನ್ನು ಆರೋಗ್ಯ ಇಲಾಖೆಯಿಂದ ಗುರುತಿಸಲಾಗಿದೆ ಪೋಲಿಯೋ ಲಸಿಕೆ ಹಾಕುವುದಕ್ಕೆ 221 ಟೀಮ್ ಗಳನ್ನು ರಚಿಸಲಾಗಿದೆ. ಹಾಗೂ33 ಸಂಚಾರಿ ಟೀಮ್‌ಗಳ ಮೂಲಕ ವ್ಯಾಕ್ಸಿನ್ ಸಾಮಾಗ್ರಿಗಳನ್ನು ತಲುಪಿಸುವುದಕ್ಕೆ ಕ್ರಮ ಕೈಗೊಳ್ಳಲಾಗಿದೆ . 442 ಆಶಾ,ಅಂಗನ ವಾಡಿ ಮತ್ತು ಆರೋಗ್ಯ ಇಲಾಖೆಯ ಕಾರ್ಯಕರ್ತರನ್ನು ಪೋಲಿಯೊ ವ್ಯಾಕ್ಸಿನ್ ಹಾಕಲು ನೇಮಿಸಲಾಗಿದೆ. 47 ಸೂಪರವೈಸರ್ ಗಳನ್ನು ಕೂಡ ನೇಮಿಸಲಾಗಿದೆ ಮೋದಲ ಹಂತದಲ್ಲಿ ಬೂತ್ ಮಟ್ಟದಲ್ಲಿ ಮಕ್ಕಳಿಗೆ ಪೋಲಿಯೋ ಹನಿ ನೀಡಲಾಗುವುದು ನಂತರ ಆರೋಗ್ಯ ಇಲಾಖೆ ಸಿಬ್ಬಂದಿಗಳು ಮನೆ ಮನೆಗೆ ಭೇಟಿ ನೀಡಿ ಮಕ್ಕಳಿಗೆ ಪೋಲಿಯೋ ಲಸಿಕೆಯನ್ನು ನೀಡಲಿದ್ದಾರೆ ತಾಲೂಕಿನ ಯಾವೊಂದು ಮಗು ಕೂಡ ಪೋಲಿಯೋ ಲಸಿಕೆಯಿಂದ ವಂಚಿವಾಗದಂತೆ ಆರೋಗ್ಯ ಇಲಾಖೆಯಿಂದ ಅಗತ್ಯ ಸಿದ್ದತೆಗಳನ್ನು ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಜಿಲ್ಲಾ ಮಲೇರಿಯಾ ಅಧಿಕಾರಿ ಡಾ.ಚಂದ್ರಶೇಖರ ಸ್ವಾಮಿ ಪುರಸಭೆ ಮುಖ್ಯಾಧಿಕಾರಿ ಪರಶುರಾಮ ದೇವಮಾನೆ, ತಾ.ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಬಿ.ಕೆ.ಅಮರೇಶಪ್ಪ,ನಯೋಪ್ರ ಅಧ್ಯಕ್ಷರಾದ ಅಬ್ದುಲ್ ಗಫೂರ್ ಸಾಬ್,ಕಾಮೇಶ್ ಮಂದಕಲ್, ಸತ್ತರ್ ಬಂಗ್ಲೆವಾಲ,ತಾ. ಪ್ರಾಭಾರಿ ಶಿಶುಅಭಿವೃದ್ಧಿ ಅಧಿಕಾರಿ ಗೋಕುಲ್,ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು, ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಪಾಲಕರು ಭಾಗವಹಿಸಿದರು.

# ಪಟ್ಟಣದ ಪತ್ರಿಕೆ ವಿತರಿಕರಿಗೆ ಲಾಯನ್ಸ ಕ್ಲಬ್ ಮಾನ್ವಿ ವತಿಯಿಂದ ಸ್ವೆಟರ್‌ಗಳ ವಿತರಣೆ - ಎಂ. ನಾಗರಾಜ.

ಯುವಮಾರ್ಗ ಸುದ್ದಿ




**ಮಾನ್ವಿ,ಡಿ.22–** ಪಟ್ಟಣದ ಮಾನ್ವಿ ಬ್ಯಾಂಕ್ ಸಭಾಂಗಣದಲ್ಲಿ ಮಾನ್ವಿ ಲಯನ್ಸ್ ಕ್ಲಬ್ ವತಿಯಿಂದ ನಡೆದ ಕಾರ್ಯಕ್ರಮದಲ್ಲಿ ಪಟ್ಟಣದಲ್ಲಿ ವಿವಿಧ ದಿನ ಪತ್ರಿಕೆಗಳನ್ನು ವಿತರಿಸುವ ಪತ್ರಿಕ ವಿತರಕರಿಗೆ ಮಾನ್ವಿ ಲಯನ್ಸ್ ಕ್ಲಬ್‌ನ ಅಧ್ಯಕ್ಷರಾದ ಎಂ. ನಾಗರಾಜ ಸ್ವೆಟರ್‌ಗಳನ್ನು ವಿತರಿಸಿ ಮಾತನಾಡಿ ಪ್ರತಿ ದಿನ ಪತ್ರಿಕೆಗಳಲ್ಲಿ ಬರವ ಸುದ್ದಿಗಳನ್ನು ಹೊತ್ತ ದಿನ ಪತ್ರಿಕೆಗಳನ್ನು ಬೆಳಗಿನಜಾವವೇ ಮನೆ ಬಾಗಿಲಿಗೆ ತಲುಪಿಸುವ ಪತ್ರಿಕೆಗಳನ್ನು ಹಂಚುವ ಬಹುತೇಕ ಹುಡುಗರು ವಿದ್ಯಾರ್ಥಿಗಳಾಗಿದ್ದು ಅವರು ಪ್ರತಿದಿನ ಪತ್ರಿಕೆಗಳನ್ನು ಹಂಚುವ ಮೂಲಕ ಬರುವ ಸ್ವಲ್ಪ ಅದಾಯದಿಂದ ತಮ್ಮ ವಿದ್ಯಾಭ್ಯಾಸವನ್ನು ಪೂರ್ಣಗೊಳಿಸುತ್ತಿರುವುದು ಕಂಡುಬರುತ್ತದೆ ಡಾ. ಎ. ಪಿ. ಜೆ. ಅಬ್ದುಲ್ ಕಲಾಂ ರವರು ಕೂಡ ತಮ್ಮ ವಿದ್ಯಾರ್ಥಿ ಜೀವನದಲ್ಲಿ ಪತ್ರಿಕೆಗಳನ್ನು ಹಂಚುವ ಮೂಲಕ ವಿದ್ಯಾಭ್ಯಸವನ್ನು ಪೂರ್ಣಗೊಳಿಸಿ ದೇಶದ ಉನ್ನತ ಸ್ಥಾನವಾದ ರಾಷ್ಟ್ರಪತಿ ಹುದ್ದೆಯನ್ನು ಅಲಂಕಾರಿಸುವ ಮೂಲಕ ಇತರರಿಗೆ ಮಾದರಿಯಾಗಿದ್ದರು. ಇತ್ತಿಚಿನ ದಿನಗಳಲ್ಲಿ ತೀವ್ರವಾದ ಚಳಿ ಇಂದಾಗಿ ಪತ್ರಿಕ ವಿತರಕರ ಆರೋಗ್ಯದ ಮೇಲೆ ಪರಿಣಾಮವಾಗಬಾರದು ಎನಗ್ನುವ ಉದ್ದೇಶದಿಂದ ಮಾನ್ವಿ ಲಯನ್ಸ್ ಕ್ಲಬ್‌ನ ವತಿಯಿಂದ ಪತ್ರಿಕ ವಿತರಕರಿಗೆ ಸ್ವೆಟರ್‌ಗಳನ್ನು ವಿತರಣೆ ಮಾಡಲಾಗುತ್ತಿದೆ ಮುಂದಿನ ದಿನಗಳಲ್ಲಿ ನಮ್ಮ ಮಾನ್ವಿ ಲಯನ್ಸ್ ಕ್ಲಬ್‌ನ ವತಿಯಿಂದ ಪತ್ರಿಕ ವಿತರಕರಿಗೆ ಉಚಿತ ಆರೋಗ್ಯ ತಪಾಸಣೆ ಹಾಗೂ ಚಿಕಿತ್ಸೆ ಶಿಬಿರ, ವಿತರಕರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ, ಪತ್ರಿಕೆಗಳನ್ನು ಹಂಚುವ ವಿದ್ಯಾರ್ಥಿಗಳಿಗೆ ಉನ್ನತ ಶಿಕ್ಷಣಕ್ಕೆ ಅಗತ್ಯ ಆರ್ಥಿಕ ನೆರವನ್ನು ನೀಡುವ ಕಾರ್ಯಕ್ರಮ ಹಮ್ಮಿಕೊಳ್ಳಲಾಗುವುದು ಕೆಲವೆ ದಿನಗಳಲ್ಲಿ ಪಟ್ಟಣದಲ್ಲಿ ಹುಬ್ಬಳಿ ಜೋಷಿ ಕಣ್ಣಿನ ಆಸ್ಪತ್ರೆ ಸಹಯೋಗದಲ್ಲಿ ಕಣ್ಣಿನ ಆಸ್ಪತ್ರೆಯನ್ನು ಪ್ರಾರಂಭಿಸಿ ತಾಲೂಕಿನ ಜನರಿಗೆ ಉತ್ತಮ ನೇತ್ರ ಚಿಕಿತ್ಸೆ ನೀಡುವ ಕಾರ್ಯವನ್ನು ಹಮ್ಮಿಕೊಳ್ಳಲಾಗುವುದು ಎಂದು ತಿಳಿಸಿದರು.

ಪಟ್ಟಣದ 20ಕ್ಕೂ ಹೆಚ್ಚು ಪತ್ರಿಕೆ ವಿತರಕರಿಗೆ ಹಾಗೂ ರಾತ್ರಿ ವೇಳೆ ಕೆಲಸ ಮಾಡುವ 10ಕ್ಕೂ ಹೆಚ್ಚು ಕಾವಾಲುಗರರಿಗೆ ಸ್ವೆಟರ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಡಾ. ರೋಹಿಣಿ ಮಾನ್ವಿಕರ್, ಡಾ. ಸುರೇಶ ಬಾಬು, ಶ್ರೀ ನಗರೇಶ್ವರ ಆರ್ಯ ವೈಶ್ಯ ಸಂಘದ ತಾ. ಅಧ್ಯಕ್ಷರಾದ ಆರ್. ಮುತ್ತುರಾಜ್ ಶೆಟ್ಟಿ, ವಿಪ್ರಸಮಾಜದ ತಾ.ಅಧ್ಯಕ್ಷರಾದ ಮುದ್ದುರಂಗ ರಾವ್ ಮುತಲಿಕ್ , ರಾಮಲಿಂಗಪ್ಪ ಲಯನ್ಸ ಕ್ಲಬ್‌ನ ಕಾರ್ಯದರ್ಶಿ ಶಾಂತಮೂರ್ತಿ, ಖಜಾಂಚಿ ಶ್ರೀರಾಮ ರಾಜು, ಸದಸ್ಯರಾದ ಈರಣ್ಣ ಮರ್ಲಟ್ಟಿ, ವೆಂಕಟೇಶ್ ಇಲ್ಲೂರ್, ಡಾ. ಬಸವರಾಜ್ ಸಜ್ಜನ್, ಬಸವರಾಜ್ ಕಿರ್ಡಿ,ಶಂಭುಲಿಂಗಯ್ಯಸ್ವಾಮಿ ಹಿರೇಮಠ,ತಾ.ಪತ್ರಿಕಾ ವಿತರಕರ ಸಂಘದ ಅಧ್ಯಕ್ಷರಾದ ಬಸವನಗೌಡ ಮೇಟಿಸೇರಿದಂತೆ ಇನ್ನಿತರರು ಇದ್ದರು.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H